ಸಂಪುಟ : 10 ಸಂಚಿಕೆ 23 ಪುಟ : 4+2 ಬೆಲೆ: 3.00 ಗುರುವಾರ ಫೆಬ್ರವರಿ 20 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 23 Pages : 4+2 Price : 3.00 Thursday February 20 2025 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಇಂದು ವಿದ್ಯುತ್ ವ್ಯತ್ಯಯ


■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

110 ಕೆವ್ಹಿ ಲಕ್ಷ್ಮೇಶ್ವರ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕೆಲಸ ಕೈಗೊಳ್ಳುವುದರಿಂದ ಫೆ. 20ರಂದು ಮುಂಜಾನೆ 10 ಗಂಟೆಯಿಂದ ಸಾಯಂಕಾಲ 5.30 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ

110 ಕೆವ್ಹಿ ಲಕ್ಷ್ಮೇಶ್ವರ ಉಪಕೇಂದ್ರದಿಂದ ಪೂರೈಕೆಯಾಗುವ 33 ಕೆವ್ಹಿ ಎಮ್.ಎಮ್.ಸಿ.ಎಲ್ ಗಾಳಿಯಂತ್ರ ಘಟಕ, 33 ಕೆವ್ಹಿ ಸೊಮೆಶ್ವರ ಸ್ಪಿನ್ನಿಂಗ ಮಿಲ್, ವಿನ್ಸಾಲ್ ಸೋಲಾರ್, ಮವ್‌ಯಥೊ ಸೋಲಾರ್, ಎಲ್ಲಾ ನಗರ, ನೀರಾವರಿ ಪಂಪ್‌ಸೆಟ್ ಮತ್ತು ಗ್ರಾಮೀಣ ಪ್ರದೇಶಗಳ 11 ಕೆವ್ಹಿ ವಿತರಣಾ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕಾಗಿ ಹೆಸ್ಕಾಂ ಪ್ರಕಟಣೆ ತಿಳಿಸಿದೆ.

## ಸಂಸದ ಬಸವರಾಜ್ ಬೊಮ್ಮಾಯಿ ಪ್ರವಾಸ

■ ವಿಜಯಸಾಕ್ಷಿ ಸುದ್ದಿ, ಗದಗ



ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಲೋಕಸಭಾ ಸದಸ್ಯರಾದ ಬಸವರಾಜ್ ಬೊಮ್ಮಾಯಿ ಅವರು ಫೆಬ್ರವರಿ 21ರಂದು ಗದಗ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು, ವಿವರ ಈ ಕೆಳಗಿನಂತಿದೆ.

ಫೆಬ್ರವರಿ 21ರಂದು ಬೆಳಿಗ್ಗೆ 9.30 ಗಂಟೆಗೆ ಹುಬ್ಬಳ್ಳಿಯಿಂದ ರಸ್ತೆ ಮೂಲಕ ಹೊರಟು ಬೆಳಿಗ್ಗೆ 10.30 ಗಂಟೆಗೆ ಗದಗಿಗೆ ಆಗಮಿಸಿ ಗದಗ ತೋಂಟ-ದಾರ್ಯ ಮಠದಲ್ಲಿ ಪೂಜ್ಯ ಲಿಂ. ಡಾ. ತೋಂಟ-ದ ಸಿದ್ಧಲಿಂಗ ಮಹಾಸ್ವಾಮಿಗಳ 76ನೇ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿವರು. ಬೆ 11.30 ಗಂಟೆಗೆ ಗದಗ ಉಪವಿಭಾಗಾದಿಕಾರಿಗಳ ಕಾರ್ಯಾಲಯದ ಆವರಣದಲ್ಲಿ ಲೋಕಸಭಾ ಸದಸ್ಯರ ಜನ ಸಂಪರ್ಕ ಕಾರ್ಯಾಲಯದ ಉದ್ಘಾಟನೆ ಮಾಡುವರು. ಮಧ್ಯಾಹ್ನ 12 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆ/ ಜಿಲ್ಲಾ ಮಟ್ಟದ ಬ್ಯಾಂಕ್‌ಗಳ ಸಲಹಾ ಸಮಿತಿ ಸಭೆಯಲ್ಲಿ ಭಾಗವಹಿಸುವರು. ಮಧ್ಯಾಹ್ನ 3 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಕೇಂದ್ರ ಸರ್ಕಾರದ ಯೋಜನೆಗಳ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿಯ ದಿಶಾ ಸಭೆಯಲ್ಲಿ ಭಾಗವಹಿಸುವರು. ಸಂಜೆ 6.30 ಗಂಟೆಗೆ ಪಕ್ಷದ ಕಾರ್ಯಾಲಯದ ಕಾರ್ಯಕ್ರಮದಲ್ಲಿ ಭಾಗವಹಿಸುವರು. ರಾತ್ರಿ 8 ಗಂಟೆಗೆ ಗದುಗಿನಿಂದ ರಸ್ತೆ ಮೂಲಕ ಬೆಳಗಾವಿಗೆ ಪ್ರಯಾಣ ಮಾಡುವರು ಎಂದು ಪ್ರಕಟಣೆ ತಿಳಿಸಿದೆ.

## ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನಲ್ಲಿ ಮೆಟ್ರಿಕ್ ನಂತರದ ಕೋರ್ಸ್ ಗಳಲ್ಲಿ ಓದುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಂದ ಶುಲ್ಕ ಮರುಪಾವತಿ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ದಿನಾಂಕವನ್ನು ಮಾರ್ಚ್ 10 ರವರೆಗೆ ವಿಸ್ತರಿಸಲಾಗಿದೆ. ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ವೆಬ್ ಸೈಟ್ ವಿಳಾಸ https://bcwd.karnataka.gov.in ಸಂಪರ್ಕಿಸಬಹುದಾಗಿದೆ. ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಪ್ರಕಟಣೆ ತಿಳಿಸಿದೆ.

### ಮಾರ್ಚ್ 1, 2ರಂದು ಜಿಲ್ಲಾ ಮಟ್ಟದ ಉದ್ಯೋಗ ಮೇಳ । ಸಚಿವ ಎಚ್.ಕೆ. ಪಾಟೀಲ ಮಾಹಿತಿ

# ಜಿಲ್ಲೆಯ ಉದ್ಯೋಗಾಕಾಂಕ್ಷಿಗಳಿಗೆ ಸುವರ್ಣಾವಕಾಶ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯಲ್ಲಿ ಉದ್ಯೋಗ ಮೇಳವನ್ನು ಆಯೋಜಿಸಲಾಗುತ್ತಿದೆ. ಈ ಉದ್ಯೋಗ ಮೇಳದಲ್ಲಿ ಪ್ರತಿಷ್ಠಿತ ಕಂಪನಿಗಳು ಭಾಗವಹಿಸುತ್ತಿದ್ದು, ಜಿಲ್ಲೆಯ ಉದ್ಯೋಗ ಆಕಾಂಕ್ಷಿಗಳು ಉದ್ಯೋಗ ಮೇಳದಲ್ಲಿ ಭಾಗವಹಿಸಿ ಸದುಪಯೋಗ ಪಡೆಯಬೇಕೆಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಗದಗ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಬುಧವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಮಾರ್ಚ್ 1 ಮತ್ತು 2ರಂದು ಗದಗ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ಮಟ್ಟದ ಉದ್ಯೋಗ ಮೇಳ ಜರುಗಲಿದೆ. ಉದ್ಯೋಗ ಆಕಾಂಕ್ಷಿಗಳು ಉದ್ಯೋಗ ಮೇಳದ ದಿನದಂದು ಬೆಳಗ್ಗೆ 10ರಿಂದ ಸಂಜೆ 4ರವರೆಗೆ ಪಾಲ್ಗೊಳ್ಳುವ ಮೂಲಕ



ಉದ್ಯೋಗ ಪಡೆಯಬಹುದಾಗಿದೆ ಎಂದರು.

ಉದ್ಯೋಗ ಆಕಾಂಕ್ಷಿಗಳು ವೆಬ್‌ಸೈಟ್ ವಿಳಾಸ WWW.GADAGJOBFAIR.COM ನಲ್ಲಿ ಅಥವಾ ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡುವ ಮೂಲಕ ನೋಂದಾಯಿಸಿಕೊಳ್ಳಬೇಕು.ಕಳೆದ 3 ದಿನದಲ್ಲಿ ಉದ್ಯೋಗ ಮೇಳದ ಲಿಂಕ್ ಮೂಲಕ ಒಟ್ಟು 743 ಅಭ್ಯರ್ಥಿಗಳು ನೋಂದಣಿ ಮಾಡಿಕೊಂಡಿದ್ದಾರೆ. ಇನ್ನೂ ಹೆಚ್ಚಿನ ಅಭ್ಯರ್ಥಿಗಳು ಲಿಂಕ್ ಬಳಸಿಕೊಂಡು ನೋಂದಾಯಿಸುವ ಮೂಲಕ ಉದ್ಯೋಗ ಪಡೆಯುವಂತೆ ಸಚಿವರು ತಿಳಿಸಿದರು.

ಈ ಜಿಲ್ಲಾಮಟ್ಟದ ಉದ್ಯೋಗ ಮೇಳದಲ್ಲಿ ವಿಂಡ್ ವರ್ಡ್ ಇಂಡಿಯಾ, ಎಲ್‌ಐಸಿ, ಎಸ್‌ಬಿಐ ಲೈಫ್ ಇನ್ಸೂರೆನ್ಸ್, ಎಚ್‌ಸಿಎಲ್ ಟೆಕ್, ಹೋಂಡಾ, ವೋಲ್ವೋ ಬಸ್, ಟಾಟಾ ಎಲೆಕ್ಟ್ರಾನಿಕ್ ಸಿಸ್ಟಮ್ ಸೇರಿದಂತೆ ಹಲವು ಕಂಪನಿಗಳು ಆಗಮಿಸಲಿವೆ ಎಂದು ಹೇಳಿದರು.

ಉದ್ಯೋಗ ಮೇಳದ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳ ಕಚೇರಿ ರೂಮ್ ನಂಬರ್ 106 ಮತ್ತು ಉದ್ಯೋಗಾಧಿಕಾರಿಗಳ ಕಚೇರಿ ರೂಮ್ ನಂಬರ್ 215 ಜಿಲ್ಲಾಡಳಿತ ಭವನ ಗದಗ ಇವರನ್ನು ಸಂಪರ್ಕಿಸಬಹುದಾಗಿದೆ ಅಥವಾ ಮೊಬೈಲ್ ನಂಬರ್-9480151562, 9380985123, 6363330688, 903680429, 9008234012 ಸಂಪರ್ಕಿಸಬಹುದಾಗಿದೆ ಎಂದು ಸಚಿವರು ಮಾಹಿತಿ ನೀಡಿದರು.

ಪತ್ರಿಕಾಗೋಷ್ಠಿಯಲ್ಲಿ ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್‌ಸಾಬ್ ಬಬರ್ಚಿ, ಗದಗ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕಾಧ್ಯಕ್ಷ ಅಶೋಕ ಮಂದಾಲಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ, ಸಿದ್ದು ಪಾಟೀಲ, ಎಸ್.ಎನ್. ಬಳ್ಳಾರಿ, ಫಾರೂಕ್ ಹುಬ್ಬಳ್ಳಿ ಸೇರಿದಂತೆ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಡಾ. ಮಲ್ಲೂರ್ ಬಸವರಾಜ, ಸಹಾಯಕ ನಿರ್ದೇಶಕಿ ಉಮಾ ಪಾಳೇಗಾರ, ಸಹಾಯಕ ಸಾಂಖ್ಯಿಕ ಅಧಿಕಾರಿ ಪಿ.ಎಸ್. ಕೋಳಿವಾಡ, ಶೇಖರ ಡಿ.ಎಚ್ ಇದ್ದರು.


### ಏಕೀಕೃತ ಸಹಾಯವಾಣಿ ಆರಂಭ : ಜಿ.ಪಂ ಸಿಇಓ ಭರತ್ ಎಸ್

# ನಿಮ್ಮ ಗ್ರಾಮದಲ್ಲಿ ಸಮಸ್ಯೆಯೇ? 8277506000 ಡಯಲ್ ಮಾಡಿ


■ ವಿಜಯಸಾಕ್ಷಿ ಸುದ್ದಿ, ಗದಗ

ಗ್ರಾಮೀಣ ಪ್ರದೇಶದ ಜನರ ಕುಂದು-ಕೊರತೆಗಳ ನಿವಾರಣೆಗೆ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆಯು ನೂತನ ಹಾಗೂ ಏಕೀಕೃತ ಸಹಾಯವಾಣಿ-8277506000 ತೆರೆಯುವ ಮೂಲಕ ಪಾರದರ್ಶಕ ಹಾಗೂ ಜನರ ಸಮಸ್ಯೆಗಳಿಗೆ ತಕ್ಷಣವೇ ಸ್ಪಂದಿಸುವ ಮೂಲಕ ಜನ ಸಾಮಾನ್ಯರಿಗೆ ಹತ್ತಿರವಾಗುತ್ತಿದೆ.

ಈ ವಿಷಯದ ಕುರಿತು ಮಾಹಿತಿ ನೀಡಿದ ಗದಗ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಭರತ್ ಎಸ್ ಅವರು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆಯು ಪಂಚಮಿತ್ರ ಸಹಾಯ ವಾಣಿ 8277506000 ಆರಂಭಿಸಿದೆ. ಈ ಸಂಖ್ಯೆಗೆ ಕರೆ ಮಾಡುವ ಮೂಲಕ ಗ್ರಾಮೀಣ ಪ್ರದೇಶದ ಜನರ ಕುಂದು ಕೊರತೆ ಹಾಗೂ ಜನರಿಗೆ ಅವಶ್ಯವಿರುವ ಮಾಹಿತಿ ತಕ್ಷಣವೇ ಲಭಿಸುತ್ತದೆ ಎಂದರು.ಒಂದು ಇಲಾಖೆಗೆ ಒಂದೆ ಸಹಾಯವಾಣಿ ಎಂಬ ಉದ್ದೇಶದಿಂದ ಈ ಸಂಖ್ಯೆಯನ್ನು ತೆರೆಯಲಾಗಿದ್ದು, ನರೇಗಾ ಯೋಜನೆಯಡಿ ಮಾಡಲಾದ ಕೆಲಸಗಳು, ಗ್ರಾಮದ ಕುಂದು-ಕೊರತೆಗಳು, ಜನನ ಮತ್ತು ಮರಣ ನೋಂದಣಿ, ಕಟ್ಟಡ ನಿರ್ಮಾಣ ಪರವಾನಗಿ, ಹೊಸ ನೀರು ಪೂರೈಕೆ ಸಂಪರ್ಕ, ನೀರು ಸರಬರಾಜಿನಲ್ಲಿ



ಸಂಪರ್ಕ ಕಡಿತ, ಕುಡಿಯುವ ನೀರಿನ ನಿರ್ವಹಣೆ, ಬೀದಿ ದೀಪದ ನಿರ್ವಹಣೆ, ಗ್ರಾಮ ನೈರ್ಮಲ್ಯ ನಿರ್ವಹಣೆ, ಉದ್ದಿಮೆ ಪರವಾನಗಿ, ಸ್ವಾಧೀನ ಪ್ರಮಾಣಪತ್ರ, ನಾನಾ ಸೇವೆ ಸಂಬಂಧ ರಸ್ತೆ ಅಗೆತಕ್ಕೆ ಅನುಮತಿ, ಕೈಗಾರಿಕೆ, ಕೃಷಿ ಆಧಾರಿತ ಉತ್ಪಾದನಾ ಘಟಕ ಸ್ಥಾಪನೆಗೆ ಅನುಮತಿ, ನಿರಾಕ್ಷೇಪಣಾ ಪತ್ರ, ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಕಾರ್ಮಿಕರಿಗೆ ಜಾಬ್‌ಕಾರ್ಡ್ ವಿತರಣೆ, ಕಾರ್ಮಿಕರಿಗೆ ಉದ್ಯೋಗ ಕಲ್ಪಿಸುವುದು, ಹೊಸ ಇಲ್ಲವೇ ಅಸ್ತಿತ್ವದಲ್ಲಿರುವ ದೂರಸಂಪರ್ಕ ಮೂಲಸೌಕರ್ಯ ಗೋಪುರಕ್ಕೆ ಅನುಮತಿ ಸೇರಿದಂತೆ ನಮೂನೆ 9/11ಎ, ನಮೂನೆ




11ಬಿ ಹೀಗೆ ಹಲವಾರು ಸೇವೆಗಳ ಲಾಭ ಪಡೆಯಬಹುದು.

ಇದಲ್ಲದೆ ಚುನಾಯಿತ ಪ್ರತಿನಿಧಿಗಳ ವಿವರ, ಸಿಬ್ಬಂದಿ ವಿವರ, ಪೂರ್ಣಗೊಂಡ ಗ್ರಾಮ ಪಂಚಾಯಿತಿ ಸಭೆಗಳ ನಡಾವಳಿಗಳು, ಗ್ರಾಮ ಪಂಚಾಯಿತಿಯ ಮುಂಬರುವ ಸಭೆಗಳ ಮಾಹಿತಿ, ಆದಾಯ ಸಂಗ್ರಹ ಮಾಹಿತಿ, ಸೇವೆಗಳ ವಿವರ, ಸ್ವಸಹಾಯ ಗುಂಪಿನ ಮಾಹಿತಿ, ಗ್ರಾಮ ಪಂಚಾಯತ್‌ಗಳ ಕಾರ್ಯಕ್ರಮಗಳು- ಉಪಕ್ರಮಗಳು. ಹಾಗೆಯೇ 4(1)(ಎ) ಮತ್ತು 4(1)(ಬಿ) ಆರ್‌ಟಿಐ ದಾಖಲೆಗಳನ್ನು ಪಡೆಯಬಹುದಾಗಿದೆ.

ಈ ಡಿಜಿಟಲ್ ಸೇವೆ ಪಡೆಯಲು ಸ್ಮಾರ್ಟ್‌ಫೋನ್ ಅಗತ್ಯ. ಈ ಮೊಬೈಲ್ ಸಂಖ್ಯೆಯನ್ನು ನೋಂದಾಯಿಸಿಕೊಂಡು ಚಾಟ್ ಶುರು ಮಾಡಬಹುದು. ಮೊದಲಿಗೆ 'ಹಾಯ್' ಎಂಬ ಸಂದೇಶ ಕಳುಹಿಸಬೇಕು. ಆಗ ಪರದೆ ಮೇಲೆ ಭಾಷೆ ಆಯ್ಕೆ ಅವಕಾಶ ಸಿಗಲಿದೆ. ಬಳಿಕ ಜಿಲ್ಲೆ, ತಾಲೂಕು ಹಾಗೂ ನಿರ್ದಿಷ್ಟ ಗ್ರಾಮ ಪಂಚಾಯಿತಿ ಆಯ್ಕೆ ಮಾಡಿಕೊಳ್ಳಬೇಕು. ನಂತರ ಸೇವೆ, ಮಾಹಿತಿ, ಕುಂದುಕೊರತೆ ಎಂಬ ಮೂರು ಆಯ್ಕೆ ಮೂಡಲಿದ್ದು, ಮುಂದಿನ ಸೇವೆ ಪಡೆಯಬಹುದು.

ಒಟ್ಟಾರೆಯಾಗಿ ಪಾರದರ್ಶಕತೆ ಆಡಳಿತ ಹಾಗೂ ಜನರ ಸಮಸ್ಯೆಗಳಿಗೆ ಸ್ಪಂದಿಸುವ ನಿಟ್ಟಿನಲ್ಲಿ ಸರ್ಕಾರವೂ ಈ ಸಹಾಯವಾಣಿಯನ್ನು ತೆರೆದಿದ್ದು ಬೆಳಗ್ಗೆ 6 ಗಂಟೆಯಿಂದ ರಾತ್ರಿ 10 ಗಂಟೆಯವರೆಗೆ ಸಹಾಯವಾಣಿಯು ಕಾರ್ಯ ನಿರ್ವಹಿಸಲಿದೆ. ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಲು ಭರತ್ ಎಸ್ ಮನವಿ ಮಾಡಿದ್ದಾರೆ.

### ಫೆ. 21ರಿಂದ 8ನೇ ವರ್ಷದ ಸಂಗೀತ, ನೃತ್ಯ, ಚಿತ್ರ ಸಂಭ್ರಮಗಳ 'ಪುಲಿಗೆರೆ ಉತ್ಸವ'

# 3 ದಿನಗಳ ಕಾಲ ಸಾಂಸ್ಕೃತಿಕ ವೈಭವ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶ್ರೀ ಸೋಮೇಶ್ವರ ದೇವಸ್ಥಾನದಲ್ಲಿ ಇನ್ಫೋಸಿಸ್ ಪ್ರತಿಷ್ಠಾನ ಹಾಗೂ ಭಾರತೀಯ ವಿದ್ಯಾಭವನದ ಆಶ್ರಯದಲ್ಲಿ ಕಳೆದ 7 ವರ್ಷಗಳಿಂದ ಪುಲಿಗೆರೆ ಉತ್ಸವ ನಡೆಸುತ್ತಾ ಬರಲಾಗಿದ್ದು, ಈ ವರ್ಷವೂ ಫೆ. 21, 22 ಮತ್ತು 23ರಂದು 8ನೇ ವರ್ಷದ ಸಂಗೀತ, ನೃತ್ಯ, ಚಿತ್ರ ಸಂಭ್ರಮಗಳ 'ಪುಲಿಗೆರೆ ಉತ್ಸವ'ದ ಸಾಂಸ್ಕೃತಿಕ ಮೆರುಗು ಮೇಳೈಸಲಿದೆ ಎಂದು ಭಾರತೀಯ ವಿದ್ಯಾಭವನದ ಜಂಟಿ ನಿರ್ದೇಶಕಿ ನಾಗಲಕ್ಷ್ಮೀ ಕೆ.ರಾವ್ ಹೇಳಿದರು.

ಅವರು ಬುಧವಾರ ಪಟ್ಟಣದ ಸೋಮೇಶ್ವರ ದೇವಸ್ಥಾನದಲ್ಲಿ ಶ್ರೀ ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿ ಮತ್ತು ಹಿರಿಯರ ಸಮ್ಮುಖದಲ್ಲಿ ನಡೆದ ಪ್ರತಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿ, ಐತಿಹಾಸಿಕ ಪ್ರಸಿದ್ಧ ಸೋಮೇಶ್ವರ ದೇವಸ್ಥಾನವನ್ನು ಇನ್ಫೋಸಿಸ್ ಒಡತಿ ಡಾ.ಸುಧಾಮೂರ್ತಿಯವರು



ಶಾಸಕ ಡಾ.ಚಂದ್ರು ಲಮಾಣಿ, ಮಾಜಿ ಶಾಸಕರಾದ ಜಿ.ಎಸ್. ಗಡ್ಡದೇವರಮಠ ಮತ್ತು ಜಿ.ಎಂ. ಮಹಾಂತಶೆಟ್ಟರ ಮಾತನಾಡಿ, ಪುರಾತನ ಇತಿಹಾಸ ಹಾಗೂ ಪರಂಪರೆಗೆ ಹೆಸರಾದ ದೇವಸ್ಥಾನವನ್ನು ಡಾ.ಸುಧಾ ನಾರಾಯಣಮೂರ್ತಿಯವರು ಕೋಟ್ಯಾಂತರ ರೂ ವೆಚ್ಚದಲ್ಲಿ ಜೀರ್ಣೋದ್ಧಾರಗೊಳಿಸಿ, ದೇವಸ್ಥಾನಕ್ಕೆ ಗತವೈಭವದ ಮೆರಗು ತಂದುಕೊಡಲು ಪ್ರತಿವರ್ಷ ಪುಲಿಗೆರೆ ಉತ್ಸವ ಹೆಸರಿನಲ್ಲಿ ಕಾರ್ಯಕ್ರಮ ಮಾಡುತ್ತಿರುವುದು ನಮಗೆಲ್ಲ ಹೆಮ್ಮೆ. ಈ ವರ್ಷವೂ ಪುಲಿಗೆರೆ ಉತ್ಸವ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಉತ್ಸವದ ಕಳೆ ಹೆಚ್ಚಿಸೋಣ ಮತ್ತು ಅಗತ್ಯ ಸಹಕಾರ ನೀಡೋಣ ಎಂದರು.

ತಮ್ಮ ಪ್ರತಿಷ್ಠಾನದಿಂದ 5 ಕೋಟಿ ರೂ ವೆಚ್ಚದಲ್ಲಿ ಜೀರ್ಣೋದ್ಧಾರಗೊಳಿಸಿದ್ದಾರೆ. ಬಳಿಕ ದೇವಸ್ಥಾನದಲ್ಲಿ ಸಂಗೀತ, ನೃತ್ಯ, ಇತಿಹಾಸ ಹೀಗೆ ಸಾಂಸ್ಕೃತಿಕ ಪರಂಪರೆ ಮುಂದುವರೆಯಬೇಕು ಎಂಬ ಉದ್ದೇಶದಿಂದ ತಮ್ಮದೇ ಪ್ರತಿಷ್ಠಾನದಿಂದ ಲಕ್ಷಾಂತರ ರೂ ಖರ್ಚು ಮಾಡಿ ಪ್ರತಿ ವರ್ಷ 3 ದಿನಗಳ ಕಾಲ ಪುಲಿಗೆರೆ ಉತ್ಸವ ಕಾರ್ಯಕ್ರಮ ನಡೆಸುತ್ತಿದ್ದಾರೆ.

▸▸ 3ನೇ ಪುಟಕ್ಕೆ

### ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಕಾರ್ಯಕ್ರಮದಲ್ಲಿ ಸಚಿವ ಎಚ್.ಕೆ. ಪಾಟೀಲ ಅಭಿಮತ

# ಛತ್ರಪತಿ ಶಿವಾಜಿ ಮಹಾರಾಜರು ಸ್ವಾಭಿಮಾನಿ, ರಾಷ್ಟ್ರಪ್ರೇಮಿ

■ ವಿಜಯಸಾಕ್ಷಿ ಸುದ್ದಿ, ಗದಗ

ಛತ್ರಪತಿ ಶಿವಾಜಿ ಮಹಾರಾಜರು ನಮ್ಮ ದೇಶದ ಶ್ರೇಷ್ಠ ಸ್ವಾಭಿಮಾನಿ, ರಾಷ್ಟ್ರ ಪ್ರೇಮಿ, ಸಾಹಸಿ, ದಕ್ಷ ಆಡಳಿತಗಾರರು. ಧೈರ್ಯದಲ್ಲಿ ಯಾರನ್ನೂ ಅವರೊಂದಿಗೆ ಹೋಲಿಸಲು ಸಾಧ್ಯವಿಲ್ಲ ಎಂದು ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ ಇವರುಗಳ ಸಹಯೋಗದಲ್ಲಿ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಕಾರ್ಯಕ್ರಮವನ್ನು




ಉದ್ಘಾಟಿಸಿ ಮಾತನಾಡಿದರು.

ಗದಗ ಜಿಲ್ಲೆಯ ಶಿರಹಟ್ಟಿ ತಾಲೂಕು ಸೊರಟೂರು ಶಿವಾಜಿ ಮಹಾರಾಜರ ಕುಟುಂಬದ ಮೂಲ ಊರು ಆಗಿದ್ದು, ಇದು ಗದಗ ಜಿಲ್ಲೆಗೆ ಹೆಮ್ಮೆ ತರುವ ವಿಷಯವಾಗಿದೆ. ಶಿವಾಜಿ ಮಹಾರಾಜರ ಮೂಲವನ್ನು ತಿಳಿಸಿದ ಸಂಶೋಧಕ ಫೇರೆ ಅವರು ಶಿವಾಜಿಯವರ ಕುರಿತಾಗಿ ಹಲವಾರು ವಿಚಾರಗಳನ್ನು ಬರೆದಿದ್ದಾರೆ. ಛತ್ರಪತಿ ಶಿವಾಜಿ ಮಹಾರಾಜ ವಂಶಸ್ಥರ ಮೂಲ ಸ್ಥಳ ಈಗಿನ ಗದಗ ಜಿಲ್ಲೆಯ ಸೊರಟೂರು ಎಂದು ತಿಳಿಸಿದರು. ಇದನ್ನು ಕನ್ನಡಕ್ಕೆ ಅನುವಾದಿಸುವ ಮೂಲಕ ಕನ್ನಡಿಗರೆಲ್ಲರಿಗೂ ಶಿವಾಜಿ ಕರ್ನಾಟಕದವರೆಂದು ಪರಿಚಯಿಸಿದವರು ಸರ್ಜೂ ಕಾಟ್ಕರ್ ಎಂದು ತಿಳಿಸಿದರು.

ನಮ್ಮ ದೇಶದ ಸ್ವಾತಂತ್ರ್ಯದ ಕಹಳೆ ಊದಿದ ದಕ್ಷ ಆಡಳಿತಗಾರರು. ಶಿವಾಜಿ ಮಹಾರಾಜರ ತತ್ವಗಳನ್ನು ಪ್ರತಿಯೊಬ್ಬರೂ ಅನುಸರಿಸಬೇಕು. ಇಂತಹ ಪುಣ್ಯ ಪುರುಷರ ಜಯಂತಿಗಳನ್ನು ಇನ್ನಷ್ಟು ಸಂಭ್ರಮದಿಂದ ಅರ್ಥಪೂರ್ಣವಾಗಿ ಆಚರಿಸಬೇಕು. ಶಿವಾಜಿಯವರ ಕುರಿತು ಮತ್ತಷ್ಟು ಆಳವಾದ, ಸುದೀರ್ಘವಾದ ಚಿಂತನೆ ನಡೆಸುವ ಕೆಲಸವಾಗಬೇಕು. ಶಿವಾಜಿಯವರ ತತ್ವಗಳಿಂದ ಯುವಜನರು ಸ್ವಾಭಿಮಾನ, ಧೈರ್ಯ ಹಾಗೂ ರಾಷ್ಟ್ರಸೇವೆ ಮಾಡುವ ಮನೋಭಾವನೆ ಬೆಳೆಸಿಕೊಳ್ಳಬೇಕು.

**– ಎಚ್.ಕೆ. ಪಾಟೀಲ.**
ಜಿಲ್ಲಾ ಉಸ್ತುವಾರಿ ಸಚಿವರು.

ನಿವೃತ್ತ ಉಪನ್ಯಾಸಕರಾದ ಪ್ರೊ. ಹನುಮಂತ ಎನ್.ಕಾಳೆ ಉಪನ್ಯಾಸ ನೀಡಿ, ಶಿವಾಜಿ ಮಹಾರಾಜರು ಅಷ್ಟ ದಿಗ್ಗಜರನ್ನು ಆಸ್ಥಾನದಲ್ಲಿಟ್ಟುಕೊಂಡು ದಕ್ಷ ಆಡಳಿತ ನಡೆಸಿದವರು. ಹಿಂದೂ ಸಾಮ್ರಾಜ್ಯವನ್ನು ಅತ್ಯುನ್ನತ ಸ್ಥಾನದಲ್ಲಿರುವಂತೆ ಹೋರಾಡಿದವರೇ ಛತ್ರಪತಿ ಶಿವಾಜಿಯವರು. ನೀತಿವಂತ, ವಿಚಾರಶೀಲ, ಧರ್ಮವಂತ, ಸುಶೀಲ, ಪರೋಪಕಾರಿ ರಾಜನಾಗಿದ್ದರು ಎಂದು ತಮ್ಮ ಪತ್ರದಲ್ಲಿ ವರ್ಣಿಸಿದ್ದಾರೆ. ಬುಡಕಟ್ಟು ಜನಾಂಗದವರಿಗೆ ಶಿಕ್ಷಣ, ಸಂಸ್ಕೃತಿ, ನಾಗರಿಕತೆ ಕೊಡಿಸಿದ ಹೆಗ್ಗಳಿಕೆ ಶಿವಾಜಿಯವರಿಗೆ ಸಲ್ಲುತ್ತದೆ ಎಂದು ವಿವರಿಸಿದರು.

▸▸ 3ನೇ ಪುಟಕ್ಕೆ

## ಸಾಕ್ಷಿ ಸುಭಾಷಿತ

ದೇವರ ನುಡಿಯನ್ನು ನಿಮ್ಮ ಕಿವಿಯಿಂದಲ್ಲ
ಹೃದಯದಿಂದ ಕೇಳಿಸಿಕೊಳ್ಳಿ

–ಸುಭಾಷಿತ

## ಸಂಪಾದಕೀಯ

# ಪರಿಸರಕ್ಕೆ ಪೂರಕ ಕೈಗಾರಿಕೆಗೆ ಸರಕಾರ ಪ್ರಾಮುಖ್ಯತೆ ನೀಡಲಿ

ಕೊಪ್ಪಳದಲ್ಲಿ ಬಲ್ದೋಟಾ ಕಂಪನಿ ಮತ್ತೊಂದು ಬೃಹತ್ ಉಕ್ಕಿನ ಕೈಗಾರಿಕೆ ಸ್ಥಾಪನೆಗೆ ಮುಂದಾಗಿದೆ. ಅಂದರೆ ಕೊಪ್ಪಳ ಸಮೀಪದ ಹಾಲವರ್ತಿ ಗ್ರಾಮದ ವ್ಯಾಪ್ತಿಯಲ್ಲಿ ಸುಮಾರು 1 ಸಾವಿರ ಎಕರೆ ವ್ಯಾಪ್ತಿಯಲ್ಲಿ ಈಗಾಗಲೇ ಇರುವ ಉಕ್ಕಿನ ಕಾರ್ಖಾನೆಯನ್ನು ವಿಸ್ತರಣೆ ಮಾಡಲು ಮುಂದಾಗಿದೆ.

ಬೆಂಗಳೂರಿನಲ್ಲಿ ನಡೆದ ಬಂಡವಾಳ ಹೂಡಿಕೆದಾರರ ಸಮಾವೇಶದಲ್ಲಿ ಈ ಬಗ್ಗೆ ಒಡಂಬಡಿಕೆ ಆಗಿದೆ. ಸರ್ಕಾರ ಮತ್ತು ಕಂಪನಿಯ ನಡುವೆ ಮಾತುಕತೆಯಾಗಿದ್ದು ಈ ಘಟಕ ನಿರ್ಮಾಣದಿಂದ, 15000 ಉದ್ಯೋಗ ಸೃಷ್ಟಿಯಾಗಲಿದೆ ಎಂದು ಕಂಪನಿ ತಿಳಿಸಿದೆ. ಆದರೆ ಈ ಉಕ್ಕಿನ ಘಟಕ ನಿರ್ಮಾಣಕ್ಕೆ ಕೊಪ್ಪಳ ಭಾಗದ ಜನರಿಂದ ಪ್ರತಿರೋಧ ವ್ಯಕ್ತವಾಗಿದೆ.

ಕೊಪ್ಪಳ ಜಿಲ್ಲೆ ಒಂದರಲ್ಲಿ ಸುಮಾರು 200ಕ್ಕೂ ಹೆಚ್ಚು ಕೈಗಾರಿಕೆಗಳಿವೆ. ಬಹುತೇಕ ಕೈಗಾರಿಕೆಗಳು ಪರಿಸರಕ್ಕೆ ಹಾನಿ ಮಾಡುವಂತಹ ಕೈಗಾರಿಕೆಗಳೆ ಹೆಚ್ಚಿವೆ. ಈಗಾಗಲೇ ಸ್ಥಾಪನೆಯಾಗಿರುವ ಉಕ್ಕಿನ ಕಾರ್ಖಾನೆಗಳಿಂದ ಕೊಪ್ಪಳ ಭಾಗದಲ್ಲಿ ಆಗಿರುವ ಪರಿಣಾಮವನ್ನು ಜನ ಅನುಭವಿಸುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ಪರಿಸರಕ್ಕೆ ಹಾನಿ ಮಾಡುವ ಮತ್ತೊಂದು ಕೈಗಾರಿಕೆ ಬೇಡ ಎನ್ನುತ್ತಿದ್ದಾರೆ.

ಕೊಪ್ಪಳ ಜಿಲ್ಲೆಯ ಕೈಗಾರಿಗಳ ಸ್ಥಿತಿಗತಿ ನೋಡಿದರೆ, ಜನರ ವಿರೋಧ ನ್ಯಾಯಯುತವಾಗಿದೆ. ಸರಕಾರ ಜನರ ಅಭಿಪ್ರಾಯಕ್ಕೆ ಮನ್ನಣೆ ನೀಡಬೇಕು. ಪರಿಸರಕ್ಕೆ ಹಾನಿ ಮಾಡುವಂತಹ ಕೈಗಾರಿಕೆಗಳ ಬದಲಾಗಿ ಕೃಷಿ ಪೂರಕ ಕೈಗಾರಿಕಾ ಸ್ಥಾಪನೆಗೆ ಸರ್ಕಾರ ಮುಂದಾಗಬೇಕು.

ಕೃಷಿ ಮತ್ತು ಕೃಷಿ ಸಂಬಂಧಿ ಕೈಗಾರಿಕೆಗಳ ಸ್ಥಾಪನೆ ಸಾಧ್ಯವಾಗದಿದ್ದಲ್ಲಿ, ಪರಿಸರಕ್ಕೆ ಹಾನಿಯಾಗದ ಮೊಬೈಲ್ ಉತ್ಪಾದನೆ, ಆಟೋಮೊಬೈಲ್ ರೀತಿಯ ಕೈಗಾರಿಕೆಗಳಾದರೂ ಬರಲಿ. ಸರಕಾರ ಇನ್ನಾದರೂ ಜನರ ಅಭಿಪ್ರಾಯ ಗೌರವಿಸಲಿ.

### ಶ್ರೀ ಗುರು ಪಟ್ಟಾಧಿಕಾರ ಮಹೋತ್ಸವ ಧರ್ಮ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಮಠಗಳು ಸಂಸ್ಕಾರ ಕೊಡುವ ಕೇಂದ್ರಗಳಾಗಬೇಕು

■ ವಿಜಯಸಾಕ್ಷಿ ಸುದ್ದಿ, ಶಹಾಪುರ

ಮೌಲ್ಯಾಧಾರಿತ ಚಿಂತನಗಳು ಬಾಳಿನ ಆಶಾಕಿರಣ. ಸುಸಂಸ್ಕೃತ ಸಮಾಜ ನಿರ್ಮಾಣಕ್ಕೆ ಆಧ್ಯಾತ್ಮದ ಜ್ಞಾನ ಅವಶ್ಯಕ. ಮಠಗಳು ಮತ್ತು ಧಾರ್ಮಿಕ ಕೇಂದ್ರಗಳು ಜಾತಿಯ ಗೂಡುಗಳಾಗದೇ ಸಂಸ್ಕಾರ ಕೊಡುವ ಆಧ್ಯಾತ್ಮ ಕೇಂದ್ರಗಳಾಗಬೇಕೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಬುಧವಾರ ತಾಲೂಕಿನ ದೋರನಹಳ್ಳಿ ಶ್ರೀಮದ್ ರಂಭಾಪುರಿ ಶಾಖಾ ಸಂಸ್ಥಾನ ಹಿರೇಮಠದ ಶ್ರೀ ಗುರು ಪಟ್ಟಾಧಿಕಾರ ಮಹೋತ್ಸವ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮಾನವನ ಉಸಿರಾಟಕ್ಕೆ ಗಾಳಿ ಎಷ್ಟು ಮುಖ್ಯವೋ ಹಾಗೆಯೇ ಉಜ್ವಲ ಭವಿಷ್ಯಕ್ಕೆ ಆಚಾರ್ಯರ ಮತ್ತು ಸತ್ಪುರುಷರ ಮಾರ್ಗದರ್ಶನ ಮುಖ್ಯ. ಸಂಸ್ಕಾರಯುಕ್ತ ಜೀವನ ಶ್ರೇಯಸ್ಸಿಗೆ ಕಾರಣವಾಗುತ್ತದೆ. ಕಾಯಿಸಿದ ಚಿನ್ನ ಒಡವೆಯಾಗುತ್ತದೆ. ಬಡಿದ ತಾಮ್ರ ತಂತಿಯಾಗುತ್ತದೆ. ಕೆತ್ತಿದ ಕಲ್ಲು ಸುಂದರ ಮೂರ್ತಿಯಾಗುತ್ತದೆ. ಅದರಂತೆ ಸಂಸ್ಕಾರದಿಂದ ಮನುಷ್ಯ ಆದರ್ಶ ವ್ಯಕ್ತಿಯಾಗಿ ಬಾಳಲು ಸಾಧ್ಯವಾಗುತ್ತದೆ. ಭೌತಿಕ ಜೀವನ ಸಮೃದ್ಧಗೊಂಡಂತೆ ಆಂತರಿಕ ಬದುಕನ್ನು ಪರಿಶುದ್ಧಗೊಳಿಸುವ ಶಕ್ತಿ ಗುರುವಿಗೆ ಇದೆ.

ವೀರಶೈವ ಧರ್ಮದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ದಶ ಧರ್ಮ ಸೂತ್ರಗಳ ಪರಿಪಾಲನೆಯಿಂದ ಬದುಕು ಬಲಗೊಳ್ಳುವುದರಲ್ಲಿ ಸಂದೇಹವಿಲ್ಲ. ದೋರನಹಳ್ಳಿ ಹಿರೇಮಠ ಶ್ರೀ ರಂಭಾಪುರಿ ಪೀಠದ ಶಾಖಾ ಮಠವಾಗಿದ್ದು, ಸಗರ ನಾಡಿನಲ್ಲಿ ಪ್ರಖ್ಯಾತಿಯನ್ನು ಪಡೆದಿದೆ. ಭಕ್ತರ ಬಾಳಿಗೆ ಆಧ್ಯಾತ್ಮ ದಾರಿ ತೆ-ೂರಿ ಸನ್ಮಾರ್ಗಕ್ಕೆ ಕರೆತಂದ ಕೀರ್ತಿ ಶ್ರೀ ಮಠಕ್ಕೆ ಇದೆ. ಶ್ರೀ ವೀರ ಮಹಾಂತ ಶಿವಾಚಾರ್ಯರ ಅಗಲಿಕೆಯಿಂದ ತೆರವಾದ ಸ್ಥಾನಕ್ಕೆ ಅಭಿನವ ಮಹಾಂತೇಶ್ವರ ಶಿವಾಚಾರ್ಯ ಸ್ವಾಮಿಗಳವರಿಗೆ ಶ್ರೀ ಮಠದ ಪಟ್ಟಾಧಿಕಾರ ನೆರವೇರಿಸಿ ಆಶೀರ್ವದಿಸಲಾಗಿದೆ. ಕನ್ಯಾಕೋಳೂರು ಚನ್ನವೀರ ಶಿವಾಚಾರ್ಯರು ನೂತನ ಶ್ರೀಗಳಿಗೆ ಧಾರ್ಮಿಕ ಸಂಸ್ಕಾರ ಮತ್ತು ಷಟ್ಸ್ಥಲ ಬ್ರಹ್ಮೋಪದೇಶ ಮಾಡಿ ಶುಭ ಹಾರೈಸಿದ್ದಾರೆ ಎಂದರು.

ನೇತೃತ್ವ ವಹಿಸಿದ ದೋರನಹಳ್ಳಿ ಚಿಕ್ಕಮಠದ ಶಿವಲಿಂಗ ರಾಜೇಂದ್ರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಬಹು ದಿನಗಳ ಸಂಕಲ್ಪ ಇಂದು ನೆರವೇರಿದೆ. ಗುರು–ಶಿಷ್ಯರ ಸಂಬಂಧ ತಾಯಿ–ಮಕ್ಕಳ ಸಂಬಂಧ ಇದ್ದಂತೆ. ಮಠಗಳಿಂದ ಸಮಾಜದಲ್ಲಿ ಶಾಂತಿ–ಸಾಮರಸ್ಯ, ಭಾವೈಕ್ಯತೆ ಬೆಳೆದು ಬರುವ ನಿಟ್ಟಿನಲ್ಲಿ ಕೊಟ್ಟ ಕೊಡುಗೆ ಅಪಾರವಾದುದು. ಶ್ರೀ ರಂಭಾಪುರಿ ಜಗದ್ಗುರುಗಳ ಆಶೀರ್ವಾದದಿಂದ ದೋರನಹಳ್ಳಿ ಹಿರೇಮಠಕ್ಕೆ ಯೋಗ್ಯ ಶ್ರೀಗಳು ಪ್ರಾಪ್ತವಾಗಿರುವುದು ಭಕ್ತರ ಸೌಭಾಗ್ಯವೆಂದರು.

ಶ್ರೀನಿವಾಸ ಸರಡಗಿಯ ರೇವಣಸಿದ್ಧ ಶಿವಾಚಾರ್ಯರು ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿ, ಘಟಗಳಿಂದ ಮಠ ಬೆಳೆಯಬೇಕು. ಮಠಗಳಿಂದ ಘಟಗಳು ಬೆಳಗಬಾರದು. ಕ್ರಿಯಾಶೀಲ ವ್ಯಕ್ತಿತ್ವದಿಂದ ಧರ್ಮಕ್ಕೆ ಮತ್ತು ಮಠಕ್ಕೆ ಶ್ರೇಯಸ್ಸು ಉಂಟಾಗುವುದರಲ್ಲಿ ಯಾವುದೇ ಸಂದೇಹವಿಲ್ಲ. ನೂತನ ಶ್ರೀಗಳು ಈ ಭಾಗದಲ್ಲಿ ಆಧ್ಯಾತ್ಮ ಜ್ಯೋತಿ ಬೆಳಗಲೆಂದು ಆಶಿಸಿದರು.

ದೇವಾಪುರ ಶಿವಮೂರ್ತಿ ಶ್ರೀಗಳು, ಅಚಲೇರಿ ಸೂತ್ರೇಶ್ವರ ಶ್ರೀಗಳು, ದಂಡಗುಂಡ ಸಂಗನಬಸವ ಶ್ರೀಗಳು ಚರಬಸವೇಶ್ವರ ಸಂಸ್ಥಾನ ಗದ್ದುಗೆ ಬಸವಯ್ಯ ಶರಣರು ಉಪಸ್ಥಿತರಿದ್ದರು. ಮಾಜಿ ಶಾಸಕ ಗುರು ಪಾಟೀಲ, ಜಿಲ್ಲಾ ಬಿ.ಜೆ.ಪಿ ಮಾಜಿ ಅಧ್ಯಕ್ಷ ಶರಣು ಗೋಪಾಲರೆಡ್ಡಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು.

ಪಟ್ಟಾಧಿಕಾರ ಧಾರ್ಮಿಕ ಕಾರ್ಯಕ್ರಮದ ನೇತೃತ್ವವನ್ನು ಶಹಾಪುರದ ಸಿದ್ಧೇಶ್ವರ ಶ್ರೀಗಳು, ಸಗರದ ಮರುಳ ಮಹಾಂತ ಶ್ರೀಗಳು, ಸೋಮಶೇಖರ ಶ್ರೀಗಳು, ಮುದ್ರಿಕಿಯ ಶೀಲವಂತ ಶ್ರೀಗಳು, ಹಲಕರ್ಟಿಯ ಮುನೀಂದ್ರ ಶ್ರೀಗಳು ವಹಿಸಿದ್ದರು. ಸನ್ನತಿಯ ಚಂದ್ರಶೇಖರ ಶಾಸ್ತ್ರಿಗಳು, ಹುರಸಗುಂಡಗಿ ಶರಣಯ್ಯ ಶಾಸ್ತ್ರಿಗಳು, ಕುರಕುಂದಿಯ ಚನ್ನಯ್ಯ ಶಾಸ್ತ್ರಿಗಳು ಪ್ರಧಾನ ಪುರೋಹಿತರಾಗಿ ಭಾಗವಹಿಸಿದ್ದರು. ಹಲವಾರು ಗಣ್ಯರಿಗೆ ಮತ್ತು ದಾನಿಗಳಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆಯಿತ್ತು ಶುಭ ಹಾರೈಸಿದರು. ದೋರನಹಳ್ಳಿ ಈಶ್ವರಪ್ಪಗೌಡ ಲಕ್ಕಶೆಟ್ಟಿ ಸರ್ವರನ್ನು ಸ್ವಾಗತಿಸಿದರು. ಮಹೇಶ ಪತ್ತಾರ ನಿರೂಪಿಸಿದರು.



ನೂತನ ಪಟ್ಟಾಧ್ಯಕ್ಷರಾದ ಅಭಿನವ ಮಹಾಂತೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಮಾನವೀಯ ಸಂಬಂಧಗಳು ಶಿಥಿಲಗೊಳ್ಳುತ್ತಿರುವ ಸಂದರ್ಭದಲ್ಲಿ ನಾಡಿನ ಮಠಗಳು ಭಕ್ತ ಸಂಕುಲಕ್ಕೆ ಸಂಸ್ಕೃತಿ, ಸಭ್ಯತೆ ಉಳಿಸಿ–ಬೆಳೆಸುವ ಅವಶ್ಯಕತೆಯಿದೆ. ಶ್ರೀ ಮಠದ ಪೂರ್ವ ಶ್ರೀಗಳು ಹಾಕಿದ ದಾರಿಯಲ್ಲಿ ಹಾಗೂ ಶ್ರೀ ರಂಭಾಪುರಿ ಜಗದ್ಗುರುಗಳ ಮಾರ್ಗದರ್ಶನದಲ್ಲಿ ದೋರನಹಳ್ಳಿ ಹಿರೇಮಠದ ಸಕಲ ಸದ್ಭಕ್ತರನ್ನು ಸನ್ಮಾರ್ಗದತ್ತ ಕರೆದೊಯ್ಯುವ ಜವಾಬ್ದಾರಿ ನಮ್ಮದಾಗಿದೆ ಎಂದರು.

# 3ಡಿ ಕೀಹೋಲ್ ಆಪರೇಷನ್ ಕಾರ್ಯಾಗಾರ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದಲ್ಲಿ ಪ್ರಪ್ರಥಮ ಬಾರಿಗೆ 3ಡಿ ಕೀಹೋಲ್ ಆಪರೇಷನ್ ಬಗ್ಗೆ ಕಾರ್ಯಾಗಾರವನ್ನು ಎಲ್.ವೈ. ದೇಸಾಯಿ ಸ್ಪರ್ಶ ಆಸ್ಪತ್ರೆ ಹಾಗೂ ಗದಗ ಸ್ತ್ರೀರೋಗ ತಜ್ಞರ ಸಂಘದ ವತಿಯಿಂದ ಆಯೋಜಿಸಲಾಗಿತ್ತು.

ಉತ್ತರ ಕರ್ನಾಟಕದಲ್ಲೇ ಪ್ರಥಮ ಬಾರಿಗೆ ಜರುಗಿದ ಈ ಕಾರ್ಯಕ್ರಮದಲ್ಲಿ ಕರ್ನಾಟಕ, ಮಹಾರಾಷ್ಟ್ರ ಹಾಗೂ ಆಂಧ್ರಪ್ರದೇಶದಿಂದ ಸುಮಾರು 160 ವೈದ್ಯರು ಭಾಗವಹಿಸಿದ್ದರು.

ವೇಟ್‌ಲ್ಯಾಬ್ ತರಬೇತಿಯ ಉಪಯೋಗವನ್ನು ಎಲ್ಲ 160 ವೈದ್ಯರು ಪಡೆದುಕೊಂಡರು. ನಂತರ ಶಸ್ತ್ರಕ್ರಿಯಾ ದಿಗ್ಗಜರಾದ ಭಾರತದಲ್ಲಿ ಪ್ರಪ್ರಥಮ ಬಾರಿಗೆ ಗರ್ಭಕೋಶ ಕಸಿ ಮಾಡಿದ ಖ್ಯಾತಿಯ ಡಾ. ಶೈಲೇಶ್ ಪುಂತಾಂಬೇಕರ್, ಬೆಂಗಳೂರಿನ ಡಾ. ಬಿ.ರಮೇಶ್, ಮುಂಬೈನ ಡಾ. ವಿವೇಕ್ ಸಾಲುಂಕೆ, ಡಾ. ನಿತಿನ್ ಶಾ, ಡಾ. ಸುಧಾ ಟಂಡನ್ ಮತ್ತು ಗದುಗಿನವರೇ ಆದ ಡಾ. ಪ್ರಭಾ ದೇಸಾಯಿ, ಡಾ. ಗುರುಪ್ರಸಾದ್, ಡಾ. ಧನೇಶ್ ದೇಸಾಯಿ ಅವರು ಉಪನ್ಯಾಸ ನೀಡಿದರು. ಕಾರ್ಯಕ್ರಮದ ಉದ್ಘಾಟನೆಯನ್ನು ಡಾ. ಹೆಚ್. ಕೆ. ಪಾಟೀಲರ ಸಂದೇಶದೊಂದಿಗೆ ಡಾ. ಬಸವರಾಜ ಬೊಮ್ಮನಳ್ಳಿ ಜರುಗಿಸಿದರು.

ಮರುದಿನ 14 ಅತ್ಯಂತ ಕಠಿಣವಾದ ಶಸ್ತ್ರಕ್ರಿಯೆಗಳನ್ನು ಎಲ್.ವೈ. ದೇಸಾಯಿ ಸ್ಮರಣಾರ್ಥ ಸ್ಪರ್ಶ ಆಸ್ಪತ್ರೆಯಲ್ಲಿ ಎಲ್ಲ ನುರಿತ ವೈದ್ಯರು ಉಚಿತವಾಗಿ ನೆರವೇರಿಸಿದರು.

# ಪ್ರಗತಿ ಪರಿಶೀಲನಾ ಸಭೆ ಮುಂದೂಡಿಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮದ ರಾಜ್ಯ ಆಯುಕ್ತರಾದ ದಾಸ್ ಸೂರ್ಯವಂಶಿ ಅವರ ಅಧ್ಯಕ್ಷತೆಯಲ್ಲಿ ಫೆಬ್ರವರಿ 20 ರಂದು ಹಮ್ಮಿಕೊಳ್ಳಲಾಗಿದ್ದ ಜಿಲ್ಲಾ ಅಂಗವಿಕಲರ ಪ್ರಗತಿ ಪರಿಶೀಲನಾ ಸಭೆಯನ್ನು ಕಾರಣಾಂತರಗಳಿಂದ ಮುಂದೂಡಲಾಗಿದೆ ಎಂದು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಮುದಾಯ ಭವನ ಕಟ್ಟಡದ ಶಿಲಾನ್ಯಾಸ

■ ವಿಜಯಸಾಕ್ಷಿ ಸುದ್ದಿ, ಗದಗ



ಗದಗ ಜಿಲ್ಲೆಯ ಹುಲಕೋಟಿಯಲ್ಲಿ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಮಂಡಳಿ ಮತ್ತು ಕಾರ್ಮಿಕ ಕಲ್ಯಾಣ ಮಂಡಳಿಯ ಸಹಯೋಗದಲ್ಲಿ ಕಾರ್ಮಿಕರ ಸಮುದಾಯ ಭವನ ಕಟ್ಟಡ ನಿರ್ಮಾಣದ ಶಿಲಾನ್ಯಾಸ ಕಾರ್ಯಕ್ರಮವು ಮಂಗಳವಾರ ಕಾರ್ಮಿಕ ಇಲಾಖೆಯ ಸಚಿವ ಸಂತೋಷ ಲಾಡ್ ಹಾಗೂ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಅವರ ಉಪಸ್ಥಿತಿಯಲ್ಲಿ ನೆರವೇರಿತು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಗ್ಯಾರಂಟಿ ಸಮಿತಿಯ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕು ಗ್ಯಾರಂಟಿ ಸಮಿತಿ ಸದಸ್ಯರಾದ ಕೃಷ್ಣ ಗೌಡ ಪಾಟೀಲ, ಗಣ್ಯರಾದ ಡಿ.ಆರ್. ಪಾಟೀಲ, ಸಿದ್ದು ಪಾಟೀಲ, ಕಟ್ಟಡ ಹಾಗೂ ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿ ಭಾರತಿ ಡಿ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಕಾರ್ಮಿಕ ಇಲಾಖೆಯ ಅಧಿಕಾರಿ ಶ್ರೀಶೈಲ ಸೋಮನಕಟ್ಟಿ ಸೇರಿದಂತೆ ಪ್ರಮುಖರು, ಹಿರಿಯರು ಇದ್ದರು.

# ಮುಖಂಡರೊಂದಿಗೆ ಸಚಿವ ಸಂತೋಷ್ ಲಾಡ್ ಚರ್ಚೆ

■ ವಿಜಯಸಾಕ್ಷಿ ಸುದ್ದಿ, ಗದಗ



ಕಾರ್ಮಿಕ ಸಚಿವರಾದ ಸಂತೋಷ್ ಲಾಡ್ ಅವರು ಗದಗ ಸರ್ಕ್ಯೂಟ್ ಹೌಸ್‌ನಲ್ಲಿ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಶಿರಹಟ್ಟಿ ಕ್ಷೇತ್ರದ ಶಾಸಕರಾದ ಜಿ.ಎಸ್. ಪಾಟೀಲ ಸೇರಿದಂತೆ ಸ್ಥಳೀಯ ಮುಖಂಡರೊಂದಿಗೆ ಭಾಗವಹಿಸಿ ಚರ್ಚಿಸಿದರು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಗ್ಯಾರಂಟಿ ಸಮಿತಿಯ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕು ಗ್ಯಾರಂಟಿ ಸಮಿತಿಯ ಸದಸ್ಯರಾದ ಕೃಷ್ಣಗೌಡ ಪಾಟೀಲ, ಸಿದ್ದು ಪಾಟೀಲ, ಕಟ್ಟಡ ಹಾಗೂ ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿ ಭಾರತಿ ಡಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಇತರರು ಇದ್ದರು.

# ಒಳಾಂಗಣ ಕ್ರೀಡಾಂಗಣ ವೀಕ್ಷಿಸಿದ ಸಚಿವ ಎಚ್.ಕೆ.ಪಾಟೀಲ

■ ವಿಜಯಸಾಕ್ಷಿ ಸುದ್ದಿ, ಗದಗ



ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು , ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರು ಗದಗ ನಗರದ ಕಳಸಾಪುರ ರಸ್ತೆಯಲ್ಲಿನ ಒಳಾಂಗಣ ಕ್ರೀಡಾಂಗಣದ ಹಿಂದೆ 3 ಅಂಕಣಗಳ ಟೆನ್ನಿಸ್ ಗ್ರೌಂಡ್ ನಿರ್ಮಾಣದ ಸ್ಥಳವನ್ನು ಪರಿಶೀಲಿಸಿದರು.

ಸದರಿ ಟೆನ್ನಿಸ್ ಗ್ರೌಂಡ್‌ನಲ್ಲಿ 3 ಅಂಕಣಗಳ ನಿರ್ಮಾಣವಾಗಲಿದ್ದು , ಮಾರ್ಚ್ 2ನೇ ವಾರದಲ್ಲಿ ಶಿಲಾನ್ಯಾಸ ನೆರವೇರಿಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಲು ಜಿಲ್ಲಾ ಉಸ್ತುವಾರಿ ಸಚಿವರು ಕ್ರೀಡಾ ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಗದಗ– ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಗದಗ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ, ತಾಲೂಕು ಮಟ್ಟದ ಗ್ಯಾರಂಟಿ ಯೋಜನಾ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ, ಸಿದ್ದು ಪಾಟೀಲ, ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅಧಿಕಾರಿ ಶರಣು ಗೋಗೇರಿ, ಡಾ. ಶ್ರೀಧರ್ ವಿ , ಕುರಡಗಿ ಸಿಬ್ಬಂದಿಗಳು, ಗಣ್ಯರು ಹಾಜರಿದ್ದರು.



■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರು ನಗರದ ಗಂಗಿಮಡಿ ರಸ್ತೆಯ 21ನೇ ವಾರ್ಡ್‌ನಲ್ಲಿ ಲೆಕ್ಕ ಪರಿಶೋಧಕರ ಕಾರ್ಯಾಲಯದ ಕಟ್ಟಡದ ಭೂಮಿ ಪೂಜೆ ನೆರವೇರಿಸಿದರು. ಈ ಸಂದರ್ಭದಲ್ಲಿ ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಗದಗ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ, ತಾಲೂಕು ಮಟ್ಟದ ಗ್ಯಾರಂಟಿ ಯೋಜನಾ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ, ಲೆಕ್ಕ ಪರಿಶೋಧನಾ ಇಲಾಖೆಯ ಅಧಿಕಾರಿ ವರ್ಗ ಹಾಗೂ ಸಿಬ್ಬಂದಿಗಳು, ಗಣ್ಯರು ಹಾಜರಿದ್ದರು.

# ರೈತರಿಗೆ ಶುಲ್ಕ ವಿನಾಯಿತಿ ನೀಡಲು ಒತ್ತಾಯ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಸಾಲವಿಲ್ಲದ ಪ್ರಮಾಣ ಪತ್ರ(ಎನ್.ಡಿ.ಸಿ)ವನ್ನು ತಂದುಕೊಟ್ಟರೆ ಮಾತ್ರ ಬ್ಯಾಂಕ್‌ಗಳಲ್ಲಿ ರೈತರಿಗೆ ಸಾಲ ಕೊಡುತ್ತೇವೆ ಎಂದು ಹೇಳುತ್ತಿದ್ದು, ಈ ಪ್ರಮಾಣಪತ್ರ ಪಡೆಯಲು ಬ್ಯಾಂಕ್‌ಗಳಲ್ಲಿ ಅದರ ಶುಲ್ಕವನ್ನು ಕಟ್ಟಿದರೆ ಮಾತ್ರ ಸಹಿ ಮಾಡುತ್ತಿವೆಂದು ಸಾಲ ಪಡೆಯುವ ರೈತರನ್ನು ಸತಾಯಿಸುತ್ತಿದ್ದಾರೆಂದು ರೈತರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಜಿಲ್ಲಾಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸುರುವ ರೈತರು, ನಮ್ಮ ಜಮೀನಿನ ಮೇಲೆ ಬೆಳೆ ಸಾಲ ಪಡೆಯಲು ಬ್ಯಾಂಕ್ ವ್ಯವಸ್ಥಾಪಕರು ಜಮೀನಿನ ಉತಾರ, ಆಧಾರ್ ಕಾರ್ಡ್, ಎಂ.ಆರ್. ಮತ್ತು ಇ.ಸಿ. ಸಿವಿಲ್ ವರದಿ, ಖಾತೆ ಉತಾರ ಸೇರಿದಂತೆ ಹಲವು ಕಾಗದಪತ್ರಗಳನ್ನು ಪಡೆಯುತ್ತಾರೆ. ಎನ್.ಡಿ.ಸಿ ಪ್ರಮಾಣಪತ್ರಕ್ಕೆ ಸಹಿ ಮತ್ತು ಸೀಲ್ ಹಾಕಿಕೊಡಲು ಪ್ರತೀ ಬ್ಯಾಂಕ್‌ನಲ್ಲಿಯೂ 100ರಿಂದ 200 ರೂ ವರೆಗೂ ಶುಲ್ಕ ಕಟ್ಟಬೇಕು.

ಇದರಿಂದ ಸಾಲ ಕೇಳಲು ಬಂದ ರೈತರಿಗೆ ಮತ್ತಷ್ಟು ಸಾಲದ ಹೊರೆಯಾಗಲಿದೆ. ಇಷ್ಟು ತೊಂದರೆ ಕೊಡದೇ ಸಿವಿಲ್ ವರದಿಯ ಆಧಾರ ಮೇಲೆಯೇ ಸಾಲ ಕೊಡುವಂತಾಗಬೇಕು. ಆದ್ದರಿಂದ ಬ್ಯಾಂಕ್‌ಗಳು ಶುಲ್ಕವನ್ನು ಕಟ್ಟಿಸಿಕೊಳ್ಳದೇ ಎನ್.ಡಿ.ಸಿ ಪ್ರಮಾಣಪತ್ರವನ್ನು ಕೊಡುವಂತೆ ಲೀಡ್ ಬ್ಯಾಂಕ್ ವ್ಯವಸ್ಥಾಪಕರಿಗೆ ಸೂಚಿಸುವಂತೆ ರೈತರಾದ ಅಮೃತ ಮಂಟೂರು, ಬಸವರಾಜ ಪಾಪನಾಶಿ, ಪ್ರಕಾಶ ಗರ್ಜಪ್ಪನವರ, ಮಂಜುನಾಥ ಯಾವಗಲ್ಲ, ಪ್ರವೀಣ ಚೋಳಚಗುಡ್ಡ, ಅಶೋಕ ಪಾಟೀಲ ಮುಂತಾದವರು ಮನವಿಯಲ್ಲಿ ಒತ್ತಾಯಿಸಿದ್ದಾರೆ.

ಶಿವಾಜಿ ಮಹಾರಾಜರ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಪೂಜ್ಯ ಶ್ರೀ ಬಸವಮೂರ್ತಿ ಮಾದಾರ ಚೆನ್ನಯ್ಯ ಸ್ವಾಮೀಜಿ ಅಭಿಪ್ರಾಯ

# ಶಿವಾಜಿ ಮಹಾರಾಜರ ಭಾವನೆಗಳನ್ನು ಅರ್ಥ ಮಾಡಿಕೊಳ್ಳಬೇಕು

■ ವಿಜಯಸಾಕ್ಷಿ ಸುದ್ದಿ, ಗದಗ

ಭಾರತದಲ್ಲಿ ಸನಾತನ ಧರ್ಮ ಸಂಕಷ್ಟಕ್ಕೀಡಾದ ಸಂದರ್ಭದಲ್ಲಿ ಸೂರ್ಯನಂತೆ ಉದಯಿಸಿದ್ದು ಶಿವಾಜಿ ಮಹಾರಾಜರು. ಕಳೆದ ನಾಲ್ಕು ದಶಕಗಳಿಂದ ಶಿವಾಜಿ ಮಹಾರಾಜರು ಕಣ್ಮರೆಯಾಗಿದ್ದರೂ ಭಾರತೀಯರ ಮನದಲ್ಲಿ ಅಚ್ಚಳಿಯದೇ ಉಳಿದಿದ್ದಾರೆ. ಧರ್ಮಕ್ಕಾಗಿ ಹುಟ್ಟಿ ಬಂದ ದಾರ್ಶನಿಕರನ್ನು ಒಂದೊಂದು ಜಾತಿಗೆ ಸೀಮಿತಗೋಳಿಸಿರುವುದು ನೋವಿನ ಸಂಗತಿಯಾಗಿದೆ. ಜಾತಿಗಳ ಹೆಸರಿನಲ್ಲಿ ನಮ್ಮ ಧರ್ಮವನ್ನು ಇಂದು ಮರೆಯುತ್ತಿದ್ದೇವೆ. ಇಂತಹ ಸಂದಿಗ್ಧ ಪರಿಸ್ಥಿತಿಯಲ್ಲಿ ನಾವು ಶಿವಾಜಿ ಮಹಾರಾಜರ ಭಾವನೆಗಳನ್ನು ಅರ್ಥ ಮಾಡಿಕೊಳ್ಳಬೇಕು ಎಂದು ಪ.ಪೂ ಶ್ರೀ ಬಸವಮೂರ್ತಿ ಮಾದಾರ ಚೆನ್ನಯ್ಯ ಸ್ವಾಮೀಜಿ

> ಭಾರತದಲ್ಲಿದ್ದು, ಇಸ್ಲಾಂ ಮನಸ್ಥಿತಿ ಇರುವವರನ್ನು ನಾವು ವಿರೋಧಿಸುತ್ತೇವೆ. ಭಾರತ್ ಮಾತಾಕೀ ಜೈ ಎನ್ನುವವರನ್ನು ನಾವು ವಿರೋಧಿಸುವುದಿಲ್ಲ. ಆದರೆ, ಭಾರತದ ನೆಲದಲ್ಲಿದ್ದು ಬೇರೆ ದೇಶದ ಬಗ್ಗೆ ಅಭಿಮಾನ ಹೊಂದಿದವರನ್ನು ನಾವು ವಿರೋಧಿಸುತ್ತೇವೆ. ಮಕ್ಕಳಿಗೆ ಮೊದಲು ಧರ್ಮದ ಪಾಠ ಮಾಡಬೇಕಾದ ಅವಶ್ಯಕತೆ ಇದೆ. ಮಕ್ಕಳಿಗೆ ಧಾರ್ಮಿಕ ಶಿಕ್ಷಣ ನೀಡಿದರೆ ಉತ್ತಮ ನಾಗರಿಕರಾಗಿ ಬದುಕಲು ಸಾಧ್ಯವಾಗುತ್ತದೆ.
>
> – ರಾಜು ಖಾನಪ್ಪನವರ.
> ಶ್ರೀರಾಮ ಸೇನೆ ರಾಜ್ಯ ಕಾರ್ಯದರ್ಶಿ.



ಕಿವಿಮಾತು ಹೇಳಿದರು.

ನಗರದ ಮುನ್ಸಿಪಲ್ ಕಾಲೇಜು ಮೈದಾನದಲ್ಲಿ ಶ್ರೀರಾಮ ಸೇನೆ ಹಾಗೂ ಶಿವರಾಮಕೃಷ್ಣ ಸೇವಾ ಟ್ರಸ್ಟ್, ಶ್ರೀ ಛತ್ರಪತಿ ಶಿವಾಜಿ ಮಹಾರಾಜರ ಜಯಂತ್ಯುತ್ಸವ ಸಮಿತಿ ಹಮ್ಮಿಕೊಂಡಿದ್ದ 398ನೇ ಶಿವಾಜಿ ಮಹಾರಾಜರ ಜಯಂತ್ಯುತ್ಸವದ ವೇದಿಕೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಶಿವಾಜಿ ಮಹಾರಾಜರಂತೆ ತ್ಯಾಗ-ಬಲಿದಾನ ಮಾಡಲು ಸಾಧ್ಯವಿಲ್ಲ. ಆದರೆ, ನಮ್ಮ ದುರಾಸೆಯನ್ನು ಬಿಟ್ಟು ಕನಿಷ್ಠ ಅವರ ತತ್ವ ಅಳವಡಿಸಿಕೊಂಡರೆ ನಾವು ಬದಲಾಗಲು ಸಾಧ್ಯ. ನಮ್ಮ ದೇಶದಲ್ಲಿ ಜಾತೀಯತೆ ಹೋಗಲಾಡಿಸದಿದ್ದರೆ ಸಾವಿರ ಶಿವಾಜಿ ಜಯಂತಿ ಆಚರಿಸಿಯೂ ಪ್ರಯೋಜನವಿಲ್ಲ ಎಂದರು.

ಭಾವನಾ ಆರ್.ಗೌಡ ಮಾತನಾಡಿ, ಶಿವಾಜಿ ಮಹಾರಾಜರು ಜನಿಸದಿದ್ದರೆ ಭಾರತ ದೇಶವು ಇಸ್ಲಾಮಿಕ್ ದೇಶವಾಗುತ್ತಿತ್ತು. ಸ್ವಾತಂತ್ರ್ಯ ಹೋರಾಟಗಾರರಿಗೂ ಶಿವಾಜಿ ಮಹಾರಾಜರ ತತ್ವ, ಆದರ್ಶಗಳು ಪ್ರೇರಣೆಯಾಗಿದ್ದವು. ಭಾರತದ ಪಕ್ಕದಲ್ಲಿರುವ ಅರಬ್ಬಿ ಸಮುದ್ರ ಅರಬ್ಬರ ಹೆಸರಾಗಿ ಇಂದಿಗೂ ಉಳಿದುಕೊಂಡಿದೆ. ಪರಕೀಯರು ಭಾರತದ ಮನೆ-ಮನೆಗೆ ದಾಳಿ ಮಾಡಿ, ತಾಯಿಯನ್ನು ಮಮ್ಮಿ, ತಂದೆಯನ್ನು ಡ್ಯಾಡಿಯನ್ನಾಗಿ ಪರಿವರ್ತಿಸಿ ಹೊದರು ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಆಧುನಿಕತೆಯ ಸೊಬಗಿಗೆ ನಮ್ಮ ಸಂಸ್ಕಾರ, ಸೊಬಗು ನಾಶ ಆಗುತ್ತಾ ಹೋಗುತ್ತಿದೆ. ನಮ್ಮ ಪರಂಪರೆಯ ಹಬ್ಬಗಳನ್ನು ಹೆಣ್ಣುಮಕ್ಕಳಿಗೆ ತಿಳಿಸಿಕೊಡಬೇಕು. ಹಬ್ಬ-ಹರಿದಿನಗಳ ವೈಜ್ಞಾನಿಕ ಮಹತ್ವವನ್ನು ತಿಳಿಸುವ ಅವಶ್ಯಕತೆ ಇದೆ. ಅಕ್ಕಮಹಾದೇವಿಯ ತತ್ವ, ಆದರ್ಶಗಳು ಭಾರತೀಯ ಮಹಿಳೆಯರಿಗೆ ಅವಶ್ಯಕತೆ ಇದೆ. ಭಾರತೀಯ ಪರಂಪರೆಯಲ್ಲಿ ತಂದೆ-ತಾಯಿಯ ವಿರುದ್ಧವಾಗಿ ನಡೆದ ಯಾರೂ ಸಾಧನೆ ಮಾಡಲು ಇಂದಿಗೂ ಸಾಧ್ಯವಾಗಿಲ್ಲ ಎಂದು ಹೇಳಿದರು.

ಛತ್ರಪತಿ ಶಿವಾಜಿ ಮಹಾರಾಜರ ಜಯಂತ್ಯುತ್ಸವ ಸಮಿತಿಯ ನಿಕಟಪೂರ್ವ ಅಧ್ಯಕ್ಷ ಜಗದೀಶ್ ಎಸ್.ಪಿ ಮಾತನಾಡಿ, ಭಾರತ ಇಂದು ಭಾರತವಾಗಿ ಉಳಿಯಲು ಪ್ರಮುಖ ಕಾರಣ ಛತ್ರಪತಿ ಶಿವಾಜಿ ಮಹಾರಾಜರಾಗಿದ್ದಾರೆ. ಅಂದು ಅವರ ಜನನ ಆಗದಿದ್ದರೆ ಇಂದು ಭಾರತ ಇಸ್ಲಾಂಮಿಕ್ ರಾಷ್ಟ್ರವಾಗಿರುತ್ತಿತ್ತು. ಭಾರತೀಯರ ಕೊನೆಯ ಉಸಿರು ಇರುವವರೆಗೂ ಶಿವಾಜಿ ಮಹಾರಾಜರನ್ನು ಆರಾಧಿಸುತ್ತಾ, ಅವರ ಶೌರ್ಯ, ಪರಾಕ್ರಮ ಅಳವಡಿಸಿಕೊಳ್ಳಬೇಕು ಎಂದರು.

ಈ ಸಂದರ್ಭದಲ್ಲಿ 2025ರ ಶಿವಾಜಿ ಜಯಂತ್ಯುತ್ಸವ ಸಮಿತಿ ಅಧ್ಯಕ್ಷ ವಿರೂಪಾಕ್ಷಪ್ಪ ಹೆಬ್ಬಳ್ಳಿ, ಮಹೇಶ್ ರೋಖಡೆ, ನಿಕಟಪೂರ್ವ ಅಧ್ಯಕ್ಷ ಜಗದೀಶ್ ಎಸ್.ಪಿ, ಶ್ರೀಕಾಂತ್ ಖಟವಟೆ, ಕಿಸನ್ ಮೆರವಾಡೆ, ಶ್ರೀರಾಮ ಸೇನೆ ಗದಗ ಜಿಲ್ಲಾಧ್ಯಕ್ಷ ಸೋಮು ಗುಡಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

> ಭಾರತ ನೆಲಕ್ಕಾಗಿ ಪ್ರಾಣ ಪಣಕ್ಕಿಟ್ಟ ಶಿವಾಜಿ ಮಹಾರಾಜರ ಜಯಂತಿ ಮಾಡುವುದೇ ಗೌರವದ ಸಂಗತಿ. ಶ್ರೀರಾಮ ಸೇನೆ ಸಂಘಟನೆ ಹಾಗೂ ಶಿವಾಜಿ ಮಹಾರಾಜರ ಅನುಯಾಯಿಗಳಿಂದ ಸತತ 8 ವರ್ಷಗಳಿಂದ ನಗರದಲ್ಲಿ ಅದ್ದೂರಿ ಮೆರವಣಿಗೆ ಮಾಡಿಕೊಂಡು ಬರುತ್ತಿರುವುದು ಗದಗ ಜಿಲ್ಲೆಯ ಹೆಮ್ಮೆಯ ವಿಷಯ. ಹಿಂದೂ ಸಂಘಟನೆಗಳಿಂದ ಹಿಂದೂ ಸಂಸ್ಕೃತಿ ಇಂದು ಉಳಿಯುತ್ತಿದೆ.
>
> – ಅನಿಲ ಅಬ್ಬಿಗೇರಿ.
> ಹಿಂದೂ ಮುಖಂಡರು.

ಕಾರ್ಮಿಕ ಸಂಘಟನೆಗಳೊಂದಿಗೆ ಸಚಿವ ಸಂತೋಷ ಲಾಡ್ ಸಮಾಲೋಚನಾ ಸಭೆ

# ಅಸಂಘಟಿತ ರೈತರಿಗೂ ಸೌಲಭ್ಯ ಒದಗಿಸಲು ಚಿಂತನೆ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಕಾರ್ಮಿಕ ಇಲಾಖೆ ಸಚಿವ ಸಂತೋಷ್ ಲಾಡ್ ಅವರ ಅಧ್ಯಕ್ಷತೆಯಲ್ಲಿ ಕಾರ್ಮಿಕ ಸಂಘಟನೆಗಳೊಂದಿಗೆ ಸಮಾಲೋಚನಾ ಸಭೆಯು ಮಂಗಳವಾರ ಜರುಗಿತು.

ಕಟ್ಟಡ ಕಾರ್ಮಿಕರು ಸೇರಿದಂತೆ ಇತರೆ ಕಾರ್ಮಿಕರಿಗೆ ಯಾವುದಾದರೂ ರೀತಿಯ ಅಪಘಾತ ಸಂಭವಿಸಿದಲ್ಲಿ ಜಿಲ್ಲೆಯಲ್ಲಿ ಈಗಾಗಲೇ ಗುರುತಿಸಿರುವ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದರೆ ಅದನ್ನು ಮರುಪಾವತಿಸುವ ಅವಕಾಶವಿರುತ್ತದೆ. ಈ ಅವಕಾಶವನ್ನು ತಾಲೂಕಿನಲ್ಲಿರುವ ಖಾಸಗಿ ಆಸ್ಪತ್ರೆಗಳಿಗೂ ಸಹ ನೀಡಬೇಕೆಂದು ಓರ್ವ ಕಾರ್ಮಿಕರು ಸಭೆಯಲ್ಲಿ ತಿಳಿಸಿದರು.

ಇದಕ್ಕೆ ಪ್ರತಿಕ್ರಿಸಿದ ಕಾರ್ಮಿಕ ಸಚಿವ ಸಂತೋಷ ಲಾಡ್, ಖಾಸಗಿ ಆಸ್ಪತ್ರೆಯನ್ನು ಗುರುತಿಸಲು ಅದರದೇ ಆದ ನಿಯಮಗಳಿವೆ.




ಆ ನಿಯಮಗಳಿಗೆ ಒಳಪಡುವ ಯಾವುದಾದರೂ ಖಾಸಗಿ ಆಸ್ಪತ್ರೆ ಟೆಂಡರ್‌ನ ನಿಯಮಗಳು ಹಾಗೂ ಷರತ್ತಿಗಳಿಗನುಸಾರ ಭಾಗವಹಿಸಿದರೆ ಮಾತ್ರ ಅವಕಾಶ ನೀಡಲಾಗುವುದೆಂದು ಉತ್ತರಿಸಿದರು.

ಕಾರ್ಮಿಕರಿಗೆ ಕೌಶಲ್ಯಾಭಿವೃದ್ಧಿ ತರಬೇತಿ ನೀಡಬೇಕೆಂದು ಕಾರ್ಮಿಕರು ಸಚಿವರಿಗೆ ಕೇಳಿಕೊಂಡಾಗ, ಕಾರ್ಮಿಕ ಸಚಿವರು ಅಂತಾರಾಷ್ಟ್ರೀಯ ಮಟ್ಟದಲ್ಲಿನ ಕೌಶಲ್ಯ ತರಬೇತಿಗಳನ್ನು ಜಿಲ್ಲಾ ಮಟ್ಟದಲ್ಲಿ ಇನ್ನೂ ಕೆಲವೇ ದಿನಗಳಲ್ಲಿ ಪ್ರಾರಂಭಿಸಲು ಚರ್ಚಿಸಲಾಗುವುದು ಎಂದರು.

> ರೈತರು ಸಹ ಕಾರ್ಮಿಕರಾಗಿದ್ದು, ಹೊಲದಲ್ಲಿ ಕೆಲಸ ಮಾಡುವ ಸಂದರ್ಭದಲ್ಲಿ ಹಾವಿನಿಂದ ಅಥವಾ ಇನ್ನಾವುದೇ ಕೀಟಗಳ ಕಡಿತದಿಂದ ಅಪಘಾತ ಸಂಭವಿಸಿದಾಗ ಅವರಿಗೂ ಸಹ ಕಟ್ಟಡ ಕಾರ್ಮಿಕರಿಗೆ ನೀಡುವ ಸೌಲಭ್ಯಗಳನ್ನು ನೀಡಬೇಕೆಂದು ರೈತರು ಸಚಿವರಿಗೆ ಕೇಳಿದರು. ಇದಕ್ಕೆ ಉತ್ತರಿಸಿದ ಸಚಿವರು, ರೈತರು ಅಸಂಘಟಿತ ವಲಯಕ್ಕೆ ಸೇರಿದವರಾಗಿದ್ದು, ಸೆಸ್ ಅನುದಾನವನ್ನು ಬಳಸಲು ಅವಕಾಶವಿಲ್ಲದ ಕಾರಣ ಸಂಘಟಿತ ವರ್ಗಕ್ಕೆ ಸಿಗುವ ಎಲ್ಲಾ ಸೌಲಭ್ಯಗಳನ್ನು ಸಹ ಅಸಂಘಟಿತ ರೈತರಿಗೂ ಸಹ ಎಲ್ಲಾ ಸೌಲಭ್ಯಗಳು ಸಿಗುವ ನಿಟ್ಟಿನಲ್ಲಿ ಚಿಂತನೆ ನಡೆದಿದೆ ಎಂದು ಪ್ರತಿಕ್ರಿಯಿಸಿದರು.

ಕೆಲವೊಂದು ಕಾರ್ಮಿಕರ ಅಹವಾಲುಗಳನ್ನು ಸ್ವೀಕರಿಸಿ ಮತ್ತು ಸ್ಥಳದಲ್ಲಿಯೇ ಇತ್ಯರ್ಥಗೊಳಿಸಿದರು. ಈ ಸಂದರ್ಭದಲ್ಲಿ ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ, ಶಾಸಕರಾದ ಜಿ.ಎಸ್. ಪಾಟೀಲ, ಡಾ. ಚಂದ್ರು ಲಮಾಣಿ, ಎಸ್.ವಿ. ಸಂಕನೂರ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ ಸೇರಿದಂತೆ ಕಟ್ಟಡ ಹಾಗೂ ಇತರೆ ನಿರ್ಮಾಣ ಕಾರ್ಮಿಕ ಕಲ್ಯಾಣ ಮಂಡಳಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭಾರತಿ ಡಿ, ಕಾರ್ಮಿಕ ಆಯುಕ್ತರಾದ ಡಾ. ಎಚ್.ಎನ್. ಗೋಪಾಲಕೃಷ್ಣ, ಹೆಚ್ಚುವರಿ ಕಾರ್ಮಿಕ ಆಯುಕ್ತರಾದ ಡಾ. ಎಸ್.ಬಿ. ರವಿಕುಮಾರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಸೇರಿದಂತೆ ಇತರ ಅಧಿಕಾರಿಗಳು, ಕಾರ್ಮಿಕ ಸಂಘಟನೆಗಳ ಪದಾಧಿಕಾರಿಗಳು ಹಾಗೂ ಕಾರ್ಮಿಕರು ಉಪಸ್ಥಿತರಿದ್ದರು.

▶▶ ಮೊದಲನೇ ಪುಟದಿಂದ

# 3 ದಿನಗಳ ಕಾಲ ಸಾಂಸ್ಕೃತಿಕ ವೈಭವ

ದೇಶದ ಪ್ರಸಿದ್ಧ ಸಂಗೀತಕಾರರು, ನೃತ್ಯಪಟುಗಳು, ಚಿತ್ರಕಲಾವಿದರಿಂದ ಸಂಗೀತದ ರಸದೌತಣ ನೀಡುವ ಕಾರ್ಯ ಮಾಡುತ್ತಿರುವುದು ನಿಜಕ್ಕೂ ಶ್ಲಾಘನೀಯ ಎಂದರು.

ಬ, ಾ ರ ್ ತಿ ೀ ಂ ು ್ ು ವಿದ್ಯಾಭವನದಿಂದ ಬೆಂಗಳೂರು ಹೊರತುಪಡಿಸಿದರೆ ದೊಡ್ಡ ಪ್ರಮಾಣದಲ್ಲಿ ಕಾರ್ಯಕ್ರಮ ನಡೆಯುತ್ತಿರುವದು ಲಕ್ಷ್ಮೇಶ್ವರದ ಪುಲಿಗೆರೆ ಉತ್ಸವ ಮಾತ್ರ. ಈ ಕಾರ್ಯಕ್ರಮಕ್ಕೆ ಈ ಭಾಗದ ಎಲ್ಲರ ಸಹಕಾರ ಅಗತ್ಯವಾಗಿದೆ. ಫೆ.21ರಂದು ಬೆಳಿಗ್ಗೆ 6 ಗಂಟೆಗೆ ಪುಲಿಗೆರೆ ಉತ್ಸವ ಕಾರ್ಯಕ್ರಮವನ್ನು ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್‌ನ ಅಧ್ಯಕ್ಷ ಚಂಬಣ್ಣ ಬಾಳಿಕಾಯಿ, ಭಾರತೀಯ ವಿದ್ಯಾಭವನದ ಜಂಟಿ ನಿರ್ದೇಶಕಿ ನಾಗಲಕ್ಷ್ಮೀ ಕೆ.ರಾವ್ ಅವರು ಉದ್ಘಾಟಿಸಲಿದ್ದಾರೆ. ಅತಿಥಿಗಳಾಗಿ ಇನ್ಫೋಸಿಸ್ ಪ್ರತಿಷ್ಠಾನದ ಸಿಎಸ್‌ಆರ್ ವಿಭಾಗದ ವ್ಯವಸ್ಥಾಪಕರಾದ ಪ್ರಶಾಂತ ಹೆಗಡೆ ಮತ್ತಿತರರು ಆಗಮಿಸುವರು.

ಸಂಜೆ 4ಕ್ಕೆ ಸೋಮೇಶ್ವರನ ಪಲ್ಲಕ್ಕಿ ಉತ್ಸವ ನೆರವೇರಲಿದೆ. 3 ದಿನಗಳ ಕಾಲ ನಿತ್ಯ ಬೆಳಿಗ್ಗೆ 6ರಿಂದ 8 ಗಂಟೆವರೆಗೆ ಉದಯರಾಗದ ಕಾರ್ಯಕ್ರಮಗಳು ಮತ್ತು ಸಂಜೆ 6ರಿಂದ 9.30ರವರೆಗೆ ಸಂಧ್ಯಾರಾಗದ ಕಾರ್ಯಕ್ರಮಗಳು ಜರುಗಲಿವೆ ಎಂದು ತಿಳಿಸಿದರು.

ವಿ.ಎಲ್. ಪೂಜಾರ, ಎಮ್.ಆರ್. ಪಾಟೀಲ, ಬಸವರಾಜ ಬೆಂಡಿಗೇರಿ, ವಿರೂಪಾಕ್ಷಪ್ಪ ಪಡಗೇರಿ, ಬಸವೇಶ ಮಹಾಂತಶೆಟ್ಟರ, ಎನ್.ಆರ್. ಸಾತಪುತೆ, ಗುರಣ್ಣ ಪಾಟೀಲಕುಲಕರ್ಣಿ, ಬಸವರಾಜ ಬಾಳಿಕಾಯಿ, ಸೋಮಶೇಖರ ಕೇರಿಮನಿ, ನಿಂಗಪ್ಪ ತಹಸೀಲ್ದಾರ, ಮಯೂರಗೌಡ ಪಾಟೀಲ, ನಿಂಗಪ್ಪ ಗೊರವರ, ಮಹೇಶ ಹೊಗೆಸೊಪ್ಪಿನ, ಮಾಲಾದೇವಿ ದಂದರಗಿ, ಗೀತಾ ಮಾನ್ವಿ, ಪೂರ್ಣಾಜಿ ಕರಾಟೆ, ಬಿ.ಎಸ್. ಬಾಳೇಶ್ವರಮಠ, ಈಶ್ವರ ಮೇಡ್ಲೇರಿ ಮುಂತಾದವರು ಉಪಸ್ಥಿತರಿದ್ದರು.

# ನಾಡು-ನುಡಿಗೆ ಜಕ್ಕಲಿ ಗ್ರಾಮದ ಕೊಡುಗೆ ಅನನ್ಯ



■ ವಿಜಯಸಾಕ್ಷಿ ಸುದ್ದಿ, ರೋಣ

ಕನ್ನಡ ನಾಡು-ನುಡಿಗೆ ಜಕ್ಕಲಿ ಗ್ರಾಮದ ಕೊಡುಗೆ ಅನನ್ಯವಾಗಿದೆ ಎಂದು ರೋಣ ತಾಲೂಕಾ ಗ್ಯಾರಂಟಿ ಸಮಿತಿ ಅಧ್ಯಕ್ಷ ಸಂಗನಗೌಡ ಪಾಟೀಲ ಹೇಳಿದರು.

ಅವರು ಬುಧವಾರ ನಿಡಗುಂದಿಕೊಪ್ಪ ಗ್ರಾಮದಲ್ಲಿ ಜರುಗುತ್ತಿರುವ ಗಜೇಂದ್ರಗಡ ತಾಲೂಕಾ ಮಟ್ಟದ ಪ್ರಥಮ ಕನ್ನಡ ಸಾಹಿತ್ಯ ಸಮ್ಮೇಳನದ ನಿಮಿತ್ತ ಜಕ್ಕಲಿ ಗ್ರಾಮದಿಂದ ಆರಂಭಗೊಂಡ ಭುವನೇಶ್ವರಿ ದೇವಿಯ ಮೆರವಣಿಗೆಗೆ ಚಾಲನೆ ನೀಡಿ ಮಾತನಾಡಿದರು.

ದಿ.ಅಂದಾನಪ್ಪ ದೊಡ್ಡಮೇಟಿ ಯವರ ದೇಶಪ್ರೇಮ ನಮಗೆಲ್ಲರಿಗೂ ಮಾದರಿಯಾಗಿದೆ. ಅವರ ಹೋರಾಟ ಎಂದಿಗೂ ಸ್ಮರಣೀಯ. ಇಂದು ಕನ್ನಡನಾಡು ಏಕೀರಣಗೊಂಡಿದ್ದರೆ ಅದು ದಿ.ಅಂದಾನಪ್ಪ ದೊಡ್ಡಮೇಟಿ ಯವರ ದಿಟ್ಟತನದ ಪ್ರತಿಫಲವಾಗಿದೆ. ಮುಖ್ಯವಾಗಿ ಜಕ್ಕಲಿ ಇತಿಹಾಸವನ್ನು ಹೊಂದಿರುವ ಗ್ರಾಮವಾಗಿದ್ದು ಗ್ರಾಮಕ್ಕೆ ರಾಷ್ಟ್ರಪಿತ ಮಹಾತ್ಮ ಗಾಂಧಿ, ನೇಹರು ಸಹ ಆಗಮಿಸಿದ್ದು ತಾಲೂಕಿನ ಕಿರ್ತಿಯನ್ನು ಹೆಚ್ಚಿಸಿದೆ ಎಂದರು.

ಇದಕ್ಕೂ ಮೊದಲು ದಿ.ಅಂದಾನಪ್ಪ ದೊಡ್ಡಮೇಟಿ ಯವರ ನಿವಾಸದಲ್ಲಿ ಕನ್ನಡಾಂಬೆಯ ಭಾವಚಿತ್ರಕ್ಕೆ ಪೂಜೆಯನ್ನು ಸಲ್ಲಿಸಲಾಯಿತು. ಅಭಿನವ ಚನ್ನಬಸವ ಶ್ರೀಗಳು ಸಾನ್ನಿಧ್ಯ ವಹಿಸಿದ್ದರು. ಎಂ.ಎ. ಹಿರೇವಡೆಯರ ಅಧ್ಯಕ್ಷತೆ ವಹಿಸಿದ್ದರು.

ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ರಮೇಶ ಪಲ್ಲೇದ, ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ, ತಾ.ಪಂ ಮಾಜಿ ಸದಸ್ಯರಾದ ಅಂದಪ್ಪ ಬಿಚ್ಚೂರ, ಸಂದೇಶ ದೊಡ್ಡಮೇಟಿ, ರವೀಂದ್ರನಾಥ ದೊಡ್ಡಮೇಟಿ, ಅಶೋಕ ಯಾವಗಲ್ಲ, ಮುತ್ತು ಮೇಟಿ, ತಾ.ಪಂ ಇಓ ಚಂದ್ರಶೇಖರ ಕಂದಕೂರ, ಎಸ್.ಎಸ್. ರಿತ್ತಿ, ಸಿ.ಕೆ. ಕೇಸರಿ, ಬಸವರಾಜ ದೇಸಾಯಿಪಟ್ಟಿ ಸೇರಿದಂತೆ ಗ್ರಾ.ಪಂ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು, ಅಂಗನವಾಡಿ ಹಾಗೂ ಆಶಾ ಕಾರ್ಯಕರ್ತೆಯರು ಪಾಲ್ಗೊಂಡಿದ್ದರು.

# ಹಸು, ಎಮ್ಮೆಗಳಿಗೆ ಉಚಿತ ಗರ್ಭಧಾರಣೆ

■ ವಿಜಯಸಾಕ್ಷಿ ಸುದ್ದಿ, ಡಂಬಳ

ಬಿ.ಎಸ್.ಎಸ್ ಮೈಕ್ರೋ ಫೈನಾನ್ಸ್ ರೈತರಿಗೆ ಉಪಯುಕ್ತವಾಗಲೆಂದು ಬೈಫ್ ಸಂಸ್ಥೆಯ ಮೂಲಕ ರೈತರ ಮನೆ ಬಾಗಿಲಿಗೆ ಹಸು-ಎಮ್ಮೆಗಳಿಗೆ ಉಚಿತ ಗರ್ಭಧಾರಣೆ ಸೇವೆಯನ್ನು ನೀಡುತ್ತಿದ್ದು, ಇದರ ಸದುಪಯೋಗವನ್ನು ರೈತರು ಪಡೆದುಕೊಳ್ಳಬೇಕು ಎಂದು ಮುಂಡರಗಿ ತಾಲೂಕಾ ವೈದ್ಯಾಧಿಕಾರಿ ಡಾ. ಎಸ್.ವಿ. ತಿಗರಿಮಠ ಹೇಳಿದರು.

ಡಂಬಳ ಹೋಬಳಿಯ ಮೇವುಂಡಿ ಗ್ರಾಮದಲ್ಲಿ ಬಿ.ಎಸ್.ಎಸ್ ಮೈಕ್ರೋ ಫೈನಾನ್ಸ್ ಲಿಮಿಟೆಡ್, ಬೈಫ್ ಸಂಸ್ಥೆ ಮತ್ತು ಪಶುಪಾಲನಾ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ಹಸು-ಎಮ್ಮೆ ಸೇರಿದಂತೆ ವಿವಿಧ



ತಳಿಗಳ ಗರ್ಭಧಾರಣೆ, ಬರಡು ಜಾನುವಾರುಗಳ ಚಿಕಿತ್ಸಾ ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಹೈನುಗಾರಿಕೆ ರೈತರನ್ನು ಆರ್ಥಿಕವಾಗಿ ಸಬಲರನ್ನಾಗಿ ಮಾಡುತ್ತದೆ. ಜಾನುವಾರುಗಳನ್ನು ಕಾಲ ಕಾಲಕ್ಕೆ ಚಿಕಿತ್ಸೆಗೆ ಒಳಪಡಿಸಬೇಕು ಎಂದು ಹೇಳಿದರು.

ಬೈಫ್ ಸಂಸ್ಥೆಯ ಜಿಲ್ಲಾ ಸಂಯೋಜಕ ಎಮ್.ಡಿ. ಹಳ್ಳಿ ಮಾತನಾಡಿ, ಜಾನುವಾರು ಅಭಿವೃದ್ಧಿ ಯೋಜನೆಯಡಿ ಬೈಫ್ ಸಂಸ್ಥೆಗೆ ಆರ್ಥಿಕ ಸಹಾಯವನ್ನು ಬಿ.ಎಸ್.ಎಸ್ ಮೈಕ್ರೋ ಫೈನಾನ್ಸ್ ಲಿಮಿಟೆಡ್ ಅವರು ಉಚಿತವಾಗಿ ಗೀರ್, ಹಳ್ಳಿಕಾರ್, ಖಿಲಾರಿ, ಎಚ್.ಎಫ್ ಹಸುಗಳ, ಮುರ್ರಾ, ಜಾಬ್ರಾಬಾವಿ ಎಮ್ಮೆಯ ತಳಿಗಳಿಗೆ ಕೃತಕ ಗರ್ಭಧಾರಣೆ ಸೇವೆಯನ್ನು ಸಂಪೂರ್ಣ ಉಚಿತವಾಗಿ ನೀಡುತ್ತದೆ. ರೈತರು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದು ಹೇಳಿದರು.

ಮೇವುಂಡಿ ಗ್ರಾಮದ 50ಕ್ಕೂ ಹೆಚ್ಚು ಹಸು-ಎಮ್ಮೆಗಳಿಗೆ ಉಚಿತ ತಪಾಸಣೆ ನಡೆಸಿ, ಔಷಧ ಮತ್ತು ಲವಣಾಂಶವುಳ್ಳ ಮಿನರಲ್ ಮಿಕ್ಸರ್ ನೀಡಲಾಯಿತು.

ಕಾರ್ಯಕ್ರಮದಲ್ಲಿ ಡಾ. ಶಿವಲಿಕಾ, ಐ.ಎ. ಗೋಕಾವಿ, ಬಿ.ಎಮ್. ಮಾಚೇನಳ್ಳಿ, ಎಮ್.ವಿ. ಹಿರೇಗೌಡ, ಕಾರ್ಯಕರ್ತ ಶಂಕರ ಪವಾರ, ರೈತರು ಇದ್ದರು. ಬೈಫ್ ಸಂಸ್ಥೆಯ ಮೂಲಕ ಹಸು-ಎಮ್ಮೆಗಳಿಗೆ ಕೃತಕ ಗರ್ಭಧಾರಣೆಗಾಗಿ 9731708843 ಸಂಖ್ಯೆಯನ್ನು ಸಂಪರ್ಕಿಸಬೇಕೆಂದು ತಿಳಿಸಲಾಗಿದೆ.

# ರೇಣುಕಾರಿಗೆ ‘ಸಾವಿತ್ರಿಬಾಯಿ ಫುಲೆ’ ಪ್ರಶಸ್ತಿ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಪಟ್ಟಣದ ಎಫ್.ಎಂ. ಡಬಾಲಿ ಸಂಯುಕ್ತ ಪದವಿಪೂರ್ವ ಮಹಾವಿದ್ಯಾಲಯದ ಪ್ರೌಢಶಾಲಾ ವಿಭಾಗದ ಹಿಂದಿ ಶಿಕ್ಷಕಿ ರೇಣುಕಾ ಜಗಂಡಭಾವಿ ಇವರಿಗೆ ರಾಜ್ಯ ಸರಕಾರಿ ಹಾಗೂ ಅರೆ ಸರ್ಕಾರಿ ನೌಕರರ ಕ್ಷೇಮಾಭಿವೃದ್ಧಿ ಸಂಘ ಬೆಂಗಳೂರು ಇವರ ವತಿಯಿಂದ ಜರುಗಿದ ಭಾರತದ ಮೊದಲ ಮಹಿಳಾ ಶಿಕ್ಷಕಿ, ಅಕ್ಷರದವ್ವ ಸಾವಿತ್ರಿಬಾಯಿ ಫುಲೆಯವರ ರಾಜ್ಯಮಟ್ಟದ 194ನೇ ಜಯಂತಿ ಕಾರ್ಯಕ್ರಮದಲ್ಲಿ ರಾಜ್ಯ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಬುಡರಕಟ್ಟಿ ಶ್ರೀ ಗುರು ಮಡಿವಾಳೇಶ್ವರ ಮಠದ ಶಿವಪಂಚಾಕ್ಷರಿ ಸ್ವಾಮೀಜಿ, ಬಾಗಲಕೋಟೆ ಶ್ರೀ ತುಳಜಾ



ಭವಾನಿ ಸುಕ್ಷೇತ್ರ ಪೆಟ್ಲೂರು ಪರಶುರಾಮ ಮಹಾರಾಜರು, ಸಂಘದ ರಾಜ್ಯಾಧ್ಯಕ್ಷ ಡಾ. ವಿಶ್ವನಾಥ ಧುಮಾಳ, ಎನ್.ಎಲ್. ರಾಥೋಡ, ಶಾಂತಾ ಮೀಶಿ ಮುಂತಾದವರು ಉಪಸ್ಥಿತರಿದ್ದರು.


ದಾವಣಗೆರೆಯಲ್ಲಿ ಪುಟ್ಟರಾಜರ ಅಭಿಮಾನಿ ಭಕ್ತರ ಬೃಹತ್ ಸಮಾವೇಶ

# ವಾರ್ಷಿಕ ಪ್ರಶಸ್ತಿಗೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಡಾ. ಪಂ. ಪುಟ್ಟರಾಜ ಸೇವಾ ಸಮಿತಿಯು ಪೂಜ್ಯ ಗುರು ಪುಟ್ಟರಾಜರ ನಿಜವಾದ ಅಭಿಮಾನಿ ಭಕ್ತರ ಮಹಾ ಮನೆಯಾಗಿರುವ ದಾವಣಗೆರೆಯಲ್ಲಿ ಮಾರ್ಚ್ ಕೊನೆಯ ಅಥವಾ ಏಪ್ರಿಲ್ ಮೊದಲ ವಾರ ಡಾ. ಪಂ. ಪುಟ್ಟರಾಜರ ಅಭಿಮಾನಿ ಭಕ್ತರ ಬೃಹತ್ ಸಮಾವೇಶ ಹಮ್ಮಿಕೊಂಡಿದೆ.

ಒಂದು ದಿನದ ಈ ಸಮಾವೇಶದಲ್ಲಿ ಡಾ. ಪಂ. ಪುಟ್ಟರಾಜ ಕವಿ ಗವಾಯಿಗಳವರ ಸಾಹಿತ್ಯ ಚಿಂತನ-ಮಂಥನ, ರಾಜ್ಯಮಟ್ಟದ ಭಕ್ತಿಗೀತೆ ಗೋಷ್ಠಿ ಮತ್ತು ವಚನ ಗೋಷ್ಠಿ, ಭಕ್ತಿಗೀತೆ ಗಾಯನ ಮತ್ತು ವಚನ ಗಾಯನ ಹಾಗೂ ಶಾಸ್ತ್ರೀಯ ನೃತ್ಯ ಗೋಷ್ಠಿಗಳನ್ನು ಆಯೋಜಿಸಿದೆ. ಈ ಸಮಾವೇಶದಲ್ಲಿ ಅಭಿಮಾನಿ ಭಕ್ತ ಪ್ರತಿನಿಧಿಯಾಗಿ ಭಾಗವಹಿಸಿ ಭಕ್ತಿ ಗೀತ ಗೋಷ್ಠಿ, ವಚನಗೋಷ್ಠಿ, ಭಕ್ತಿ ಗೀತೆ ಗಾಯನ ಮತ್ತು ನೃತ್ಯ ಮತ್ತು ನುಡಿ ನಮನ ಸಲ್ಲಿಸಲು ವಿನಂತಿಸಿಕೊಳ್ಳಲಾಗಿದೆ.



ಪ್ರತಿನಿಧಿಯಾಗಿ ಹೆಸರು ನೋಂದಾಯಿಸಿಕೊಂಡು ಗೋಷ್ಠಿಗಳಲ್ಲಿ ಭಾಗವಹಿಸುವ ಪೂಜ್ಯರ ಅಭಿಮಾನಿ ಭಕ್ತ, ಕವಿ-ಕಲಾವಿದರಿಗೆ ಅಭಿಮಾನಿ ಭಕ್ತ ಶ್ರೇಷ್ಠ, ಪುಟ್ಟರಾಜ ಸಾಹಿತ್ಯ, ಸಂಗೀತ ಮತ್ತು ನೃತ್ಯ ಸೇವಾಶ್ರೀ ಸತ್ಕಾರ ನೀಡಿ ಗೌರವ ಸಲ್ಲಿಸಲಾಗುವುದು. ದಾವಣಗೆರೆ ಜಿಲ್ಲೆಯ ಹೊರಗಿನಿಂದ ಬರುವ ಅಭಿಮಾನಿ ಭಕ್ತರಿಗೆ ಸಾಮೂಹಿಕ ವಸತಿ ವ್ಯವಸ್ಥೆ ಮಾಡಲಾಗುವುದು.

ಇದೇ ಸಂದರ್ಭದಲ್ಲಿ ಡಾ. ಪಂ. ಪುಟ್ಟರಾಜ ಸೇವಾ ಸಮಿತಿಯ ಸದಸ್ಯರಾಗಿ ಸಮಿತಿಗೆ ಅನುಪಮ ಸೇವೆ ಸಲ್ಲಿಸಿದ ಅಭಿಮಾನಿ ಭಕ್ತರಿಗೆ ಪುಟ್ಟರಾಜ ಗುರು ಸೇವಾ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಗುವುದು. ಆಸಕ್ತರು, ಗೋಷ್ಠಿಗಳ ನಿರ್ವಾಹಕಿ ವಾಣಿ ಬಸವರಾಜ್, ದಾವಣಗೆರೆ ಇವರ ವಾಟ್ಸಪ್ ನಂ: 99020 52121 ಅಥವಾ 98867 17732 ಸಂಪರ್ಕಿಸಿ ಹೆಸರು ನೋಂದಾಯಿಸಿಕೊಳ್ಳಬಹುದಾಗಿದೆ ಎಂದು ಡಾ. ಪಂ. ಪುಟ್ಟರಾಜ ಸೇವಾ ಸಮಿತಿ ಸಂಸ್ಥಾಪಕ ವೇ. ಚನ್ನವೀರ ಸ್ವಾಮಿಗಳು ಹಿರೇಮಠ (ಕಡಣಿ) ಗದಗ ಇವರು ಪತ್ರಿಕಾ ಪ್ರಕಟಣೆ ಮೂಲಕ ವಿನಂತಿಸಿಕೊಂಡಿದ್ದಾರೆ.

## ಛತ್ರಪತಿ ಶಿವಾಜಿ ಮಹಾರಾಜರು ಸ್ವಾಭಿಮಾನಿ, ರಾಷ್ಟ್ರಪ್ರೇಮಿ

▶▶ ಮೊದಲನೇ ಪುಟದಿಂದ

ಸರ್ಕಾರ ಆಚರಿಸುವ ಮಹಾನ್ ಪುರುಷರ ಜಯಂತಿ ಆಚರಣೆಗಳ ಉದ್ದೇಶ ವಿಫಲವಾಗದಂತೆ ಜಿಲ್ಲಾಡಳಿತ ಗಮನಹರಿಸಬೇಕು. ಜಯಂತಿಗಳು ಸಂಬಂಧಿಸಿದ ಸಮುದಾಯಕ್ಕಷ್ಟೇ ಸೀಮಿತಗೊಳಿಸದೇ ಸರ್ವರನ್ನೂ ಆಹ್ವಾನಿಸಬೇಕು ಎಂದು ತಿಳಿಸಿದರು.

ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಛತ್ರಪತಿ ಶಿವಾಜಿ ಮಹಾರಾಜರ ವ್ಯಕ್ತಿತ್ವವು ಬಹಳ ದೊಡ್ಡದಾಗಿದೆ. ಶಿವಾಜಿ ಮಹಾರಾಜರು ಅನ್ಯಾಯದ ವಿರುದ್ಧ ಹೋರಾಟ ಮಾಡಿದ ಧೀಮಂತ ನಾಯಕರು. ಹಿಂದೂಗಳು ಹಾಗೂ ದಲಿತರಿಗೆ ಹಿಂಸೆ ಕೊಡುತ್ತಿದ್ದ ಪರಕೀಯರ ವಿರುದ್ಧ ಸಿಡಿದೆದ್ದು ಹೋರಾಡಿದರು. ತಾಯಿ ಜೀಜಾಬಾಯಿಯವರಿಂದ ಒಳ್ಳೆಯ ಸಂಸ್ಕಾರ ಕಲಿತ ಶಿವಾಜಿ ಮಹಾರಾಜರು ಗುರುಗಳಾದ ಸಂತ ರಾಮದಾಸ್ ಅವರ ಮಾರ್ಗದರ್ಶನದಲ್ಲಿ ಆದರ್ಶ ರಾಜರಾಗಿ ದಕ್ಷತೆಯಿಂದ ಆಡಳಿತ ನಡೆಸಿದರು. ಶಿವಾಜಿ ಮಹಾರಾಜರ ಜಯಂತಿಯನ್ನು ಎಲ್ಲ ಸಮಾಜದ ಜನರು ಒಗ್ಗೂಡಿ ಅರ್ಥಪೂರ್ಣವಾಗಿ ಆಚರಿಸಬೇಕಾಗಿದೆ ಎಂದರು. ಕಾರ್ಯಕ್ರಮದಲ್ಲಿ ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಗದಗ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕು ಮಟ್ಟದ ಗ್ಯಾರಂಟಿ ಯೋಜನಾ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಮರಾಠಾ ವಿದ್ಯಾವರ್ಧಕ ಸಂಘದ ಅಧ್ಯಕ್ಷ ಅರುಣಕುಮಾರ್ ಚವ್ಹಾಣ, ಉಪಾಧ್ಯಕ್ಷ ಬಸವರಾಜ ಹುಬ್ಬಳ್ಳಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಮಾಜದ ಗಣ್ಯರು ಹಿರಿಯರು ಹಾಜರಿದ್ದರು.

ಕಲಾವಿದ ಡಾ. ವೆಂಕಟೇಶ ಅಲ್ಕೋಡ ಹಾಗೂ ಸಂಗಡಿಗರ ನಾಡಗೀತೆಯೊಂದಿಗೆ ಪ್ರಾರಂಭವಾದ ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಬಿ ಸ್ವಾಗತಿಸಿದರು. ಆರ್.ಬಿ. ಚಿನಿವಾಲರ ಕಾರ್ಯಕ್ರಮ ನಿರೂಪಿಸಿದರು.

### ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದ ಅಸ್ಪೃಶ್ಯತಾ ನಿವಾರಣೆ ಕುರಿತ ಅರಿವು ಮೂಡಿಸುವ ಕಾರ್ಯಕ್ರಮದಲ್ಲಿ ಡಿವೈಎಸ್ಪಿ ಇನಾಮದಾರ

## ಪೊಲೀಸ್ ಇಲಾಖೆ ಸಮಾಜ-ಕಾನೂನುಗಳ ಸೇತುವೆ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಪ್ರತಿಯೊಂದು ಕುಟುಂಬವೂ ಶಿಕ್ಷಣಕ್ಕೆ ಹೆಚ್ಚು ಒತ್ತು ಕೊಟ್ಟಿದ್ದು, ಶಿಕ್ಷಣದಿಂದಲೇ ಸಮಾಜದಲ್ಲಿ ಅಸ್ಪೃಶ್ಯತೆ ಮತ್ತು ಮೂಢನಂಬಿಕೆಗಳು ಮೊದಲಿಗಿಂತಲೂ ಈಗ ಕಡಿಮೆಯಾಗಿದೆ ಎಂದು ಗದಗ ಜಿಲ್ಲಾ ಉಪ ಪೊಲೀಸ್ ಅಧೀಕ್ಷಕ ಜೆ.ಎಚ್.ಇನಾಮದಾರ ಹೇಳಿದರು.

ಇಲ್ಲಿಯ ಗ್ರಾ.ಪಂ ಆವರಣದಲ್ಲಿಯ ದಾನ ಚಿಂತಾಮಣಿ ಅತ್ತಿಮಬ್ಬೆ ರಂಗಮಂದಿರದಲ್ಲಿ ತಾಲೂಕು ಆಡಳಿತ, ತಾಲೂಕು ಪಂಚಾಯತ, ಸಮಾಜ ಕಲ್ಯಾಣ ಇಲಾಖೆ, ವಿವಿಧ ದಲಿತ ಸಂಘಟನೆಗಳು, ಪೃಥ್ವಿಪ್ರಿಯಾ ಸಾರ್ವತ್ರಿಕ ಸೇವಾ ಸಂಸ್ಥೆ ಎಸ್.ಸಿ ಗದಗ, ಗ್ರಾ.ಪಂ ಲಕ್ಕುಂಡಿ ಇವುಗಳ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದ ಅಸ್ಪೃಶ್ಯತಾ ನಿವಾರಣೆ ಕುರಿತು ಅರಿವು ಮೂಡಿಸುವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಅಸ್ಪೃಶ್ಯತೆಯನ್ನು ಬೇರು ಸಮೇತ ಕಿತ್ತು ಹಾಕಲು ಸರಕಾರ ಬೇರೆ ಬೇರೆ ಕಾನೂನುಗಳನ್ನು ರಚಿಸಿ ನಿರ್ಮೂಲನೆಗೆ ಯತ್ನಿಸುತ್ತಿದೆ. ಈ ದಿಸೆಯಲ್ಲಿ ಸಮಾಜ ಮತ್ತು ಕಾನೂನುಗಳ ಸೇತುವೆಯಾಗಿ ಪೊಲೀಸ್ ಇಲಾಖೆ ಕಾರ್ಯನಿರ್ವಹಿಸುತ್ತಿದೆ ಎಂದರು.

ಸಿ.ಡಬ್ಲ್ಯೂ.ಸಿ ಸದಸ್ಯ, ವಕೀಲ ಬಸವರಾಜ ಸಂಶಿ ಮಾತನಾಡಿ, ಡಾ. ಬಿ.ಆರ್. ಅಂಬೇಡ್ಕರ




ಅವರ ಸಂವಿಧಾನದ ಆಶಯಗಳಿಗೆ ಪೂರಕವಾಗಿ ನಡೆದುಕೊಂಡು ಸರ್ವರಲ್ಲಿ ಸಮಾನತೆ ತರಲು ಬುದ್ಧ, ಬಸವ, ಅಂಬೇಡ್ಕರ ತತ್ವಗಳನ್ನು ಅಳವಡಿಸಿಕೊಳ್ಳಬೇಕು. 1989ರಲ್ಲಿ ಜಾರಿಯಾದ ಎಸ್.ಸಿ-ಎಸ್.ಟಿ ದೌರ್ಜನ್ಯ ಕಾಯ್ದೆಯನ್ನು ಎಲ್ಲ ಸಮಾಜದ ಮುಖಂಡರು ಅರಿಯಬೇಕು ಎಂದರು.

ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಎಚ್.ಎಮ್. ಪಾಟೀಲ ಮಾತನಾಡಿ, ಅಸ್ಪೃಶ್ಯತೆ ಕಾನೂನು ಬಹುತೇಕ ಎಲ್ಲರಿಗೂ ಮನವರಿಕೆಯಾಗಿದೆ. ಆದರೂ ಸಹ ಪುನರ್ ಮನನ ಮಾಡಲು ಈ ಅರಿವು ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ ಮಾತನಾಡಿ, ಲಕ್ಕುಂಡಿ ಗ್ರಾಮದಲ್ಲಿ ದಲಿತ ಸಮುದಾಯ ಮುಖಂಡರನ್ನು ಗ್ರಾಮದಲ್ಲಿ ನಡೆಯುವ ಜಾತ್ರೆ, ಉತ್ಸವಗಳಲ್ಲಿ ಭಾಗವಹಿಸಲು ಆಹ್ವಾನಿಸುವುದು ಸೇರಿದಂತೆ ಎಲ್ಲ ದೇಗುಲಗಳಲ್ಲಿ ಮುಕ್ತ ಪ್ರವೇಶವಿದ್ದು, ಸಮಾನತೆಯಿಂದ ಇದ್ದೇವೆ ಎಂದರು.

ತಾ.ಪಂ ಸಹಾಯಕ ನಿರ್ದೇಶಕಿ ಅಶ್ವಿನಿ ಕುರಡಗಿ, ಎನ್.ಮಂಜುಳಾ ಮಾತನಾಡಿದರು.

ನೀಲಗುಂದ ಗ್ರಾಮದ ನಾಗರಾಜ ಜಕ್ಕಮ್ಮನವರ ನೇತೃತ್ವದ ಜಾನಪದ ಕಲಾ ತಂಡವು ಅಂಬೇಡ್ಕರ ಅವರ ಕುರಿತು ಹಾಡಿದ ಕ್ರಾಂತಿ ಗೀತೆಗಳು ಗಮನ ಸೆಳೆದವು. ಜಿಲ್ಲಾ ಉಪವಿಭಾಗದ ಮಟ್ಟದ ಎಸ್.ಸಿ-ಎಸ್.ಟಿ. ದೌರ್ಜನ್ಯ ನಿಯಂತ್ರಣ ಮತ್ತು ಜಾಗೃತಿ ಸಮಿತಿಯ ಸದಸ್ಯ ಬಸವರಾಜ ಮುಳ್ಳಾಳ, ತಾ.ಪಂ ಮಾಜಿ ಸದಸ್ಯ ಮಹೇಶ ಮುಸ್ಕಿನಭಾವಿ, ಗ್ರಾ.ಪಂ ಸದಸ್ಯರಾದ ಪೀರಸಾಬ ನದಾಫ್, ವೀರಣ್ಣ ಚಕ್ರಸಾಲಿ, ಮಹಾಂತೇಶ ಕಮತರ, ಕುಬೇರಪ್ಪ ಬೆಂತೂರು, ಲಕ್ಷ್ಮಣ ಗುಡಸಲಮನಿ, ಹನುಮಂತಪ್ಪ ಬಂಗಾರಿ, ಫಕ್ಕೀರಮ್ಮ ಬೇಲೇರಿ, ರಮೇಶ ಭಾವಿ, ಬಹುಜನ ಚಳುವಳಿಯ ಅಧ್ಯಕ್ಷೆ ನಾಗಮ್ಮ ಹಾಲಿನವರ, ಅಂಗನವಾಡಿ ಮೇಲ್ವಿಚಾರಕಿ ಸಾಹೀದಬೇಗಂ ಹತ್ತಿವಾಲೆ, ಎಂ.ಎಂ. ಹುಬ್ಬಳ್ಳಿ, ಮರಿಯಪ್ಪ ವಡ್ಡರ, ಉಪಸ್ಥಿತರಿದ್ದರು.

ಪಿ.ಡಿ.ಒ ಅಮೀರನಾಯಕ ಸ್ವಾಗತಿಸಿದರು. ಪೃಥ್ವಿಪ್ರಿಯಾ ಸಂಸ್ಥೆಯ ಕಾರ್ಯದರ್ಶಿ ರಮೇಶ ಕೊಳೂರು ನಿರೂಪಿಸಿ, ವಂದಿಸಿದರು.

ಜಿಲ್ಲಾ ಎಸ್.ಸಿ-ಎಸ್.ಟಿ ದೌರ್ಜನ್ಯ ನಿಯಂತ್ರಣ ಮತ್ತು ಜಾಗೃತಿ ಸಮಿತಿಯ ಸದಸ್ಯ ಶರೀಫ ಬಿಳೆಯಲಿ ಮಾತನಾಡಿ, ಸ್ವಾತಂತ್ರ್ಯ ಸಿಕ್ಕು 75 ವರ್ಷಗಳು ಕಳೆದರೂ ಅಸ್ಪೃಶ್ಯತೆಯ ಕುರಿತು ಇನ್ನೂ ಅರಿವು ಕಾರ್ಯಕ್ರಮಗಳು ನಡೆಯುತ್ತಿರುವುದು ವಿಷಾದನೀಯ. ಬಹಿರಂಗವಾಗಿ ಅಸ್ಪೃಶ್ಯತೆ ಇಲ್ಲವಾದರೂ ಮೇಲ್ವರ್ಗದ ಜನರಲ್ಲಿ ಆಂತರಿಕವಾಗಿ ಇನ್ನೂ ಅಸ್ಪೃಶ್ಯತೆ ಇದೆ. ಅಂತರ್ಜಾತಿ ವಿವಾಹಗಳು ಹೆಚ್ಚೆಚ್ಚು ನಡೆದಾಗ ಮಾತ್ರ ಸಮಾನತೆ ಬರಲು ಸಾಧ್ಯವಾಗುತ್ತದೆ ಎಂದರು.

## ಶಿವಾಜಿ ಮಹಾರಾಜರು ಆದರ್ಶ ಆಡಳಿತಗಾರ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಛತ್ರಪತಿ ಶಿವಾಜಿ ಮಹಾರಾಜರ ತಾಯಿ ಜೀಜಾಮಾತೆಯು ಶಿವಾಜಿಗೆ ಸಣ್ಣ ವಯಸ್ಸಿನಿಂದಲೂ ನಾಮಜಪವನ್ನು ಮಾಡಿಸುತ್ತಿದ್ದಳು. ಒಬ್ಬ ರಾಜನಿಗೆ ಬೇಕಾದ ಎಲ್ಲ ಯುದ್ಧ ಕಲೆಗಳನ್ನು ಜೀಜಾಮಾತೆಯು ಶಿವಾಜಿ ಅವರಿಗೆ ಕಲಿಸಿದ್ದರು. ಜೀಜಾಮಾತೆ ಮತ್ತು ಗುರು ರಾಮದಾಸ ಸ್ವಾಮಿಗಳ ಮಾರ್ಗದರ್ಶನದಲ್ಲಿ ಛತ್ರಪತಿ ಶಿವಾಜಿ ಮಹಾರಾಜರು ಆದರ್ಶ ರಾಜರಾಗಿದ್ದರು ಎಂದು ತಹಸೀಲ್ದಾರ ಅನಿಲ ಬಡಿಗೇರ ಹೇಳಿದರು.

ಅವರು ಬುಧವಾರ ಶಿರಹಟ್ಟಿಯ ತಹಸೀಲ್ದಾರ ಕಚೇರಿಯಲ್ಲಿ ತಾಲೂಕಾಡಳಿತದ ವತಿಯಿಂದ



ಹಮ್ಮಿಕೊಂಡಿದ್ದ ಶಿವಾಜಿ ಮಹಾರಾಜರ ಜಯಂತಿ ಕಾರ್ಯಕ್ರಮದಲ್ಲಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದರು.

ಮುಂದೆ ಶಿವಾಜಿ ಮಹಾರಾಜರು ಆದರ್ಶ ರಾಜ್ಯವನ್ನು ಸ್ಥಾಪಿಸಿದರು. ರಾಜ್ಯದಲ್ಲಿ ಧೈರ್ಯ ಮತ್ತು ಸಹನೆ, ಆಧ್ಯಾತ್ಮಿಕ ಗುಣಗಳ ಬಲದಿಂದ ಆಡಳಿತವನ್ನು ನೀಡಿ ಎಲ್ಲ ವರ್ಗಕ್ಕೂ ಮಾದರಿಯಾಗಿದ್ದರು ಎಂದರು.

ಶಿರಹಟ್ಟಿ ತಾಲೂಕಾ ಮರಾಠಾ ಸಮಾಜದ ಅಧ್ಯಕ್ಷ ಶಂಕರ ಮರಾಠೆ ಮಾತನಾಡಿ, ರಾಯಘಡದಲ್ಲಿ ಕಿರೀಟಧಾರಣೆಯ ಬಳಿಕ ಇಡೀ ಪಶ್ಚಿಮ ಭಾರತವನ್ನು ತಮ್ಮ ಆಳ್ವಿಕೆಗೆ ತಂದು ಸ್ವಾಭಿಮಾನಿ ರಾಷ್ಟ್ರ ನಿರ್ಮಾಣಕ್ಕೆ ಹೋರಾಡಿ ಮರಾಠಾ ರಾಜ್ಯವನ್ನು ಸ್ಥಾಪಿಸಿದ ಕೀರ್ತಿ ಛತ್ರಪತಿ ಶಿವಾಜಿ ಮಹಾರಾಜರಿಗೆ ಸಲ್ಲುತ್ತದೆ ಎಂದರು.

ಈ ಸಂದರ್ಭದಲ್ಲಿ ಮಾಧ್ಯಮಿಕ ಶಾಲಾ ಶಿಕ್ಷಕರ ಜಿಲ್ಲಾಧ್ಯಕ್ಷ ಎಂ.ಕೆ. ಲಮಾಣಿ, ಮರಾಠಾ ಸಮಾಜದ ಮುಖಂಡರಾದ ದೇವಪ್ಪ ಪವಾರ, ಅನಿಲ ಮಾನೆ, ಕೆ.ಎ. ಬಳಿಗೇರ, ಅಶೋಕ ವರವಿ, ನಜೀರ ಡಂಬಳ, ಶೇಳಕೆ, ಕಂದಾಯ ಇಲಾಖೆ ಸಿಬ್ಬಂದಿಗಳು ಉಪಸ್ಥಿತರಿದ್ದರು.

### ನರೇಗಲ್ಲ ಹೋಬಳಿಯಲ್ಲಿ ಭುವನೇಶ್ವರಿಯ ಭಾವಚಿತ್ರದ ಮೆರವಣಿಗೆ

## ಜಕ್ಕಲಿ, ನರೇಗಲ್ಲದಲ್ಲಿ ಕನ್ನಡದ ಕಂಪು

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನಿಡಗುಂದಿಕೊಪ್ಪದ ಶಾಖಾ ಶಿವಯೋಗ ಮಂದಿರದ ಅಭಿನವ ಚನ್ನಬಸವ ಸ್ವಾಮೀಜಿಯವರ ಸತ್ಯ ಸಂಕಲ್ಪದಂತೆ ಗಜೇಂದ್ರಗಡ ತಾಲೂಕಾ ಪ್ರಥಮ ಸಾಹಿತ್ಯ ಸಮ್ಮೇಳನ ನಿಡಗುಂದಿಕೊಪ್ಪದ ಶ್ರೀಮಠದಲ್ಲಿ ಫೆ. 20ರಂದು ನಡೆಯಲಿದೆ. ಈ ನಿಮಿತ್ಯ ನಡೆದ ತಾಯಿ ಭುವನೇಶ್ವರಿಯ ಭಾವಚಿತ್ರದ ಮೆರವಣಿಗೆ ನರೇಗಲ್ಲ ಹೋಬಳಿಯಲ್ಲಿ ಬುಧವಾರ ಸಂಚರಿಸಿ ಜಕ್ಕಲಿ, ಬೂದಿಹಾಳ, ಮಲ್ಲಾಪೂರ, ನರೇಗಲ್ಲ, ಮಾರನಬಸರಿ ಮತ್ತು ನಿಡಗುಂದಿಗಳಲ್ಲಿ ಕನ್ನಡದ ಕಂಪನ್ನು ಪಸರಿಸಿತು.

ಜಕ್ಕಲಿಯ ಅಂದಾನಪ್ಪ ದೊಡ್ಡಮೇಟಿಯವರ ಮನೆ ಯಿಂದ ಹೊರಟ ಮೆರವಣಿಗೆಗೆ ನಿಡಗುಂದಿ ಕೊಪ್ಪದ ಶ್ರೀ ಅಭಿನವ ಚನ್ನಬಸವ ಸ್ವಾಮೀಜಿ ಮತ್ತು ಧುರೀಣ ಮಿಥುನ್ ಜಿ.ಪಾಟೀಲ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಿಥುನ್ ಪಾಟೀಲ ಮಾತನಾಡಿ, ಮೈಸೂರು ರಾಜ್ಯವೆಂಬ ಹೆಸರಿನಿಂದ ಕರೆಯಲ್ಪಡುತ್ತಿದ್ದ ಈ ನಾಡಿಗೆ ಕರ್ನಾಟಕವೆಂದು ನಾಮಕರಣ ಮಾಡಬೇಕೆಂದು ಆಗ್ರಹಿಸಿ ಹೋರಾಟವನ್ನು ಪ್ರಾರಂಭಿಸಿದವರು ಅಂದಾನಪ್ಪ ದೊಡ್ಡಮೇಟಿಯವರು. ತಮ್ಮ ಚಿತ್ತಭಿತ್ತಿಯಲ್ಲಿ ಮೂಡಿದ ತಾಯಿ ಭುವನೇಶ್ವರಿಯ ಚಿತ್ರವನ್ನು ಮೊಟ್ಟಮೊದಲು ಬರೆಯಿಸಿದವರೂ ಅವರೇ. ಅವರ ನೆಲದಿಂದ ಹೊರಟ ಮೆರವಣಿಗೆ ಸಾಗುವ ದಾರಿಯುದ್ದಕ್ಕೂ ಕನ್ನಡದ ಕಂಪನ್ನು ಬೀರಲಿ ಎಂದು ಹಾರೈಸಿದರು.



ಶ್ರೀ ಅಭಿನವ ಚನ್ನಬಸವ ಸ್ವಾಮೀಜಿ ಆಶೀರ್ವಚನ ನೀಡಿ, ಗಜೇಂದ್ರಗಡ ತಾಲೂಕು ಆದ ನಂತರ ಈವರೆಗೆ ತಾಲೂಕಾ ಸಮ್ಮೇಳನವೆ ನಡೆದಿರಲಿಲ್ಲ. ನಮ್ಮ ಶ್ರೀಮಠದ ಜಾತ್ರಾಮಹೋತ್ಸವದ ಸಂದರ್ಭದಲ್ಲಿ ಈ ಕಾರ್ಯವನ್ನು ನಾವೇಕೆ ನಿರ್ವಹಿಸಬಾರದು ಎಂದು ನಮ್ಮ ಗುರುಗಳ ಅಪ್ಪಣೆಯಾಯಿತು. ಅದರಂತೆ ಸಿದ್ಧತೆ ಮಾಡಿಕೊಂಡು ಎಲ್ಲ ರೀತಿಯ ವ್ಯವಸ್ಥೆಯನ್ನೂ ಮಾಡಿಕೊಂಡಿದ್ದೇವೆ. ಪ್ರಪ್ರಥಮ ತಾಲೂಕಾ ಸಮ್ಮೇಳನವನ್ನು ನೆರವೇರಿಸಿದೆವು ಎಂಬ ಹೆಮ್ಮೆ, ಅಭಿಮಾನ ನಿಡಗುಂದಿಕೊಪ್ಪದ ಗ್ರಾಮಸ್ಥರಿಗೆ ಮತ್ತು ಶ್ರೀಮಠದ ಎಲ್ಲ ಸದ್ಭಕ್ತರಿಗಿದೆ ಎಂದರು.

ಈ ವೇಳೆ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ, ತಾಲೂಕಾ ಅಧ್ಯಕ್ಷ ಅಮರೇಶ ಗಾಣಿಗೇರ, ಹೋಬಳಿ ಘಟಕದ ಅಧ್ಯಕ್ಷ ಎಂ.ವಿ. ವೀರಾಪೂರ, ಸರ್ವಾಧ್ಯಕ್ಷ ಎಂ.ಎ. ಹಿರೇವಡೆಯರ, ರವೀಂದ್ರನಾಥ ದೊಡ್ಡಮೇಟಿ, ಸಂದೇಶ ದೊಡ್ಡಮೇಟಿ, ಹರ್ಷವರ್ಧನ ದೊಡ್ಡಮೇಟಿ, ಚನ್ನಬಸವ ದೊಡ್ಡಮೇಟಿ, ದೊಡ್ಡಮೇಟಿ ಕುಟುಂಬದ ಸದಸ್ಯರು, ಅಂದಪ್ಪ ಬಿಚ್ಚೂರ, ಅಶೋಕಪ್ಪ ಯಾವಗಲ್ಲ, ಎಂ.ಎಸ್. ದಢೇಸೂರಮಠ, ಎಂ.ಎಸ್. ಕೋರಿ, ಗಂಗಮ್ಮ ಜಂಗಮ್ಮನವರ, ಮಲ್ಲಣ್ಣ ಮೇಟಿ, ಎಸ್.ಎಸ್. ರಿತ್ತಿ, ಯಲ್ಲವ್ವ ಮಾದರ, ನಿಡಗುಂದಿ, ನಿಡಗುಂದಿಕೊಪ್ಪ, ನರೇಗಲ್ಲ, ಬೂದಿಹಾಳ, ಮಲ್ಲಾಪೂರ, ಮಾರನಬಸರಿಯ ಗ್ರಾಮಸ್ಥರು, ಇತರರಿದ್ದರು.

ನರೇಗಲ್ಲದಲ್ಲಿ: ಭುವನೇಶ್ವರಿ ತಾಯಿ ರಥಯಾತ್ರೆಯು ನರೇಗಲ್ಲಿಗೆ ಬಂದಾಗ ಪಟ್ಟಣ ಪಂಚಾಯತಿ ಅಧ್ಯಕ್ಷ ಫಕೀರಪ್ಪ ಮಳ್ಳಿ, ಉಪಾಧ್ಯಕ್ಷ ಕುಮಾರಸ್ವಾಮಿ ಕೋರಧಾನ್ಯಮಠ, ಸ್ಥಾಯಿ ಸಮಿತಿ ಚೇರಮನ್ ಮುತ್ತಪ್ಪ ನೂಲ್ಕಿ ಮತ್ತು ಸಿಬ್ಬಂದಿಯವರು ಹಾರ್ದಿಕವಾಗಿ ಬರಮಾಡಿ ಕೊಂಡರು. ಅಧ್ಯಕ್ಷ ಫಕೀರಪ್ಪ ಮಳ್ಳಿ ಮಾತನಾಡಿ, ಕನ್ನಡಾಂಬೆಯ ತೇರನ್ನು ತಿಂಗಳಲ್ಲಿ ಎರಡನೇ ಬಾರಿಗೆ ಎಳೆಯುವ ಅದೃಷ್ಟ ನಮ್ಮ ನರೇಗಲ್ಲ ಜನತೆಗೆ ದೊರಕಿದ್ದು ಪುಣ್ಯ ವಿಶೇಷ. ಈ ಅವಕಾಶವನ್ನು ಒದಗಿಸಿಕೊಟ್ಟ ಶ್ರೀ ಅಭಿನವ ಚನ್ನಬಸವ ಮಹಾಸ್ವಾಮಿಗಳವರಿಗೆ ನಾವೆಷ್ಟು ಕೃತಜ್ಞರಾಗಿದ್ದರೂ ಕಡಿಮೆ ಎಂದರು. ಹೋಬಳಿ ಘಟಕದ ಅಧ್ಯಕ್ಷ ಎಂ.ವಿ. ವೀರಾಪೂರ, ಕಳಕನಗೌಡ ಪೊಲೀಸ್‌ಪಾಟೀಲ, ಶೇಕಪ್ಪ ಕೆಂಗಾರ, ಮೈಲಾರಪ್ಪ ಚಳ್ಳಮರದ, ಅಲ್ಲಾಭಕ್ಷಿ ನದಾಫ್, ಪಟ್ಟಣದ ವಿವಿಧ ಶಾಲೆಗಳ ಮುಖ್ಯಸ್ಥರು, ಸಿಬ್ಬಂದಿಯವರು ಉಪಸ್ಥಿತರಿದ್ದರು.

### ಡಾ. ತೋಂ. ಸಿದ್ಧಲಿಂಗ ಮಹಾಸ್ವಾಮಿಗಳ 76ನೇ ಜಯಂತಿ ಅಂಗವಾಗಿ ಗ್ರಂಥ ಬಿಡುಗಡೆ, ಸಂಮಾನ ಸಮಾರಂಭ

## ಭಾವೈಕ್ಯತಾ ದಿನಾಚರಣೆ ನಾಳೆ

■ ವಿಜಯಸಾಕ್ಷಿ ಸುದ್ದಿ, ಗದಗ

ತ್ರಿವಿಧ ದಾಸೋಹಿಗಳು, ಕನ್ನಡದ ಕುಲಗುರುಗಳೆಂದೇ ಖ್ಯಾತರಾದ ಲಿಂ. ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ 76ನೇ ಜಯಂತಿ ಅಂಗವಾಗಿ ಭಾವೈಕ್ಯತಾ ದಿನಾಚರಣೆ, ಗ್ರಂಥ ಬಿಡುಗಡೆ ಹಾಗೂ ಸಂಮಾನ ಸಮಾರಂಭ ಫೆ.21ರಂದು ಬೆಳಿಗ್ಗೆ 10.30ಕ್ಕೆ ನಗರದ ತೋಂಟದಾರ್ಯ ಮಠದಲ್ಲಿ ಜರುಗಲಿದೆ.

ಬೆಳಿಗ್ಗೆ 8:30 ಗಂಟೆಗೆ ಭೀಷ್ಮಕೆರೆಯ ಬಸವೇಶ್ವರ ಪುತ್ಥಳಿಯಿಂದ ಶ್ರೀಮಠದವರೆಗೆ



ಭಾವೈಕ್ಯತಾ ಯಾತ್ರೆ ಜರುಗಲಿದೆ. ಯಾತ್ರೆಯ ಉದ್ಘಾಟನೆಯನ್ನು ಮಾಜಿ ಶಾಸಕರಾದ ಡಿ.ಆರ್. ಪಾಟೀಲ ನೆರವೇರಿಸುವರು.

ಭಾವೈಕ್ಯತಾ ಯಾತ್ರೆಯ ನಂತರ ಶ್ರೀಮಠದಲ್ಲಿ ಜರುಗುವ ವೇದಿಕೆ ಕಾರ್ಯಕ್ರಮದ ಸಾನ್ನಿಧ್ಯವನ್ನು ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ವಹಿಸುವರು. ವಿಧಾನ ಪರಿಷತ್ ಸಭಾಪತಿಗಳಾದ ಬಸವರಾಜ ಹೊರಟ್ಟಿ ಘನ ಉಪಸ್ಥಿತಿ ವಹಿಸುವರು. ನಿಜಗುಣಪ್ರಭು ತೋಂಟದಾರ್ಯ ಶ್ರೀಗಳು, ಭೈರನಟ್ಟಿ-ಶಿರೋಳದ ಶಾಂತಲಿಂಗ ಶ್ರೀಗಳು, ಸಂಡೂರು ವಿರಕ್ತಮಠದ ಪ್ರಭು ಶ್ರೀಗಳು, ಅರಸಿಕೆರೆಯ ಶಾಂತಲಿಂಗ ದೇಶಿಕೇಂದ್ರ ಶ್ರೀಗಳು, ಕೋರಣೇಶ್ವರ ಶ್ರೀಗಳು ಸಮ್ಮುಖ ವಹಿಸುವರು.

ಅಧ್ಯಕ್ಷತೆಯನ್ನು ಕಾನೂನು, ಸಂಸದೀಯ, ಪ್ರವಾಸೋದ್ಯಮ ಇಲಾಖೆ ಸಚಿವರಾದ ಎಚ್.ಕೆ. ಪಾಟೀಲ ವಹಿಸುವರು. ಪದ್ಮಶ್ರೀ ಪ್ರಶಸ್ತಿ ಪುರಸ್ಕೃತರಾದ ಭೀಮವ್ವ ಶಿಳ್ಳೆಕ್ಯಾತರ ಅವರನ್ನು ಸಂಮಾನಿಸಲಾಗುವುದು. ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಸಂಸದರಾದ ಬಸವರಾಜ ಬೊಮ್ಮಾಯಿ, ರಮೇಶ ಜಿಗಜಿಣಗಿ, ಶಾಸಕರಾದ ಜಿ.ಎಸ್. ಪಾಟೀಲ, ಸಿ.ಸಿ. ಪಾಟೀಲ, ಡಾ. ಚಂದ್ರು ಲಮಾಣಿ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ. ಸಂಕನೂರ, ಉಪವಿಭಾಗಾಧಿಕಾರಿಗಳಾದ ಮಹೇಶ ಮಾಲಗಿತ್ತಿ, ಸಾಹಿತಿಗಳಾದ ರಂಜಾನ್ ದರ್ಗಾ, ವೈದ್ಯರಾದ ಡಾ. ಸೊಲೊಮನ್, ಮಾಜಿ ಸಚಿವರಾದ ಎಸ್.ಎಸ್. ಪಾಟೀಲ, ಕಳಕಪ್ಪ ಬಂಡಿ, ಮಾಜಿ ಸಂಸದರಾದ ಐ.ಜಿ. ಸನದಿ, ಮಾಜಿ ಶಾಸಕರಾದ ಜಿ.ಎಸ್. ಗಡ್ಡದ್ದೇವರಮಠ, ರಾಮಕೃಷ್ಣ ದೊಡ್ಡಮನಿ ಆಗಮಿಸುವರು.

ಕಾರ್ಯಕ್ರಮಕ್ಕೆ ಡಾ.ತೋಂಟದ ಸಿದ್ಧಲಿಂಗ ಶ್ರೀಗಳ ಅಭಿಮಾನಿಗಳು ಹಾಜರಿರಲು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

### ಛತ್ರಪತಿ ಶಿವಾಜಿ ಮಹಾರಾಜರ 398ನೇ ಜಯಂತ್ಯುತ್ಸವ ಕಾರ್ಯಕ್ರಮ

## ಮಕ್ಕಳಿಗೆ ಉತ್ತಮ ಜೀವನ ಮೌಲ್ಯಗಳನ್ನು ಕಲಿಸಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಛತ್ರಪತಿ ಶಿವಾಜಿ ಕ್ಷತ್ರಿಯ ಮರಾಠಾ ಸಂಘದ ವತಿಯಿಂದ ಛತ್ರಪತಿ ಶಿವಾಜಿ ಮಹಾರಾಜರ 398ನೇ ಜಯಂತ್ಯುತ್ಸವ ಕಾರ್ಯಕ್ರಮವನ್ನು ಬಸ್ತಿಬಣದ ಕೆಳಗಿನ ಕಾಮನಕಟ್ಟೆ ಹತ್ತಿರ ಅದ್ದೂರಿಯಾಗಿ ಆಚರಿಸಲಾಯಿತು.

ಮಂಗಳವಾರ ಮುಂಜಾನೆಯಿಂದಲೇ ಸಂಘದ ಸದಸ್ಯರು ಉತ್ಸಾಹದಿಂದ ಶಿವಾಜಿ ಮಹಾರಾಜರ ಭಾವಚಿತ್ರದ ಬೃಹತ್ ಮೆರವಣಿಗೆಯನ್ನು ಸಕಲ ವಾದ್ಯ ವೈಭವಗಳೊಂದಿಗೆ ವಿಜೃಂಭಣೆಯಿಂದ ಜರುಗಿತು. ಸಂಜೆ ಕಾಮನಕಟ್ಟೆಯ ಹತ್ತಿರ ಹಾಕಲಾಗಿದ್ದ ಬೃಹತ್ ವೇದಿಕೆಯಲ್ಲಿ ಸಮಾರಂಭವನ್ನು ಹಮ್ಮಿಕೊಳ್ಳಲಾಗಿತ್ತು. ಅತಿಥಿಗಳು ಶಿವಾಜಿಯವರ ಪುತ್ಥಳಿಗೆ ಪುಷ್ಪಗಳನ್ನು ಅರ್ಪಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಈ ವೇಳೆ ಶಾಸಕ ಡಾ. ಚಂದ್ರು ಲಮಾಣಿ, ಮಾಜಿ ಶಾಸಕರಾದ ಗಂಗಣ್ಣ ಮಹಾಂತಶೆಟ್ಟರ ಮತ್ತು ಜಿ.ಎಸ್. ಗಡ್ಡದೇವರಮಠ ಮಾತನಾಡಿ, ಛತ್ರಪತಿ ಶಿವಾಜಿ ಮಹಾರಾಜರು ಧೈರ್ಯ



ಮತ್ತು ಸಾಹಸದ ಸಂಕೇತವಾಗಿದ್ದರು. ಅವರು ಕೇವಲ ಮಹಾರಾಷ್ಟ್ರಕ್ಕೆ ಮಾತ್ರ ಸೀಮಿತರಾಗಿರಲಿಲ್ಲ, ಶಿರಹಟ್ಟಿ ತಾಲೂಕಿನ ಸೊರಟೂರು ಗ್ರಾಮದಲ್ಲಿ ಇನ್ನೂ ಸಹ ಶಿವಾಜಿಯವರ ತಲೆಮಾರಿನ ಜನರಿದ್ದಾರೆ. ತಾಲೂಕಿನ ದೇವಿಹಾಳ ಗ್ರಾಮದ ಹೊಳಲಮ್ಮದೇವಿಯ ಆಶೀರ್ವಾದ ಪಡೆದ ಶಿವಾಜಿ ತಮ್ಮ ಖಡ್ಗವನ್ನು ಧರಿಸಿದ್ದರು. ತಾಯಿ ಜೀಜಾಬಾಯಿಯವರ ಇಚ್ಛೆಯಂತೆ ಹೊಳಲಮ್ಮದೇವಿಗೆ ಸುತ್ತಲೂ ಕೋಟೆ ನಿರ್ಮಾಣ ಮಾಡಿರುವದು ಶಿವಾಜಿಯವರು.

ಸೊರಟೂರಿನಿಂದ ಕಪ್ಪತ್ತಗುಡ್ಡದವರೆಗೂ ಶಿವಾಜಿಯವರು ಕುದುರೆ ಮೂಲಕ ಓಡಾಡಿದ ಕುರುಹುಗಳಿದ್ದು, ಅವರು ಲಕ್ಷ್ಮೇಶ್ವರ ಸೋಮೇಶ್ವರನ ಭಕ್ತರಾಗಿದ್ದರು ಎಂದು ಇತಿಹಾಸ ಹೇಳುತ್ತದೆ. ಅವರ ತಾಯಿ ಜೀಜಾಬಾಯಿ ಶಿವಾಜಿ ಮಹಾರಾಜರಿಗೆ ಚಿಕ್ಕಂದಿನಲ್ಲೇ ದೇಶಕಟ್ಟುವಲ್ಲಿ ಹೋರಾಡಿದ ಮಹಾಪುರುಷರ ಜೀವನ ಸಾಧನೆಗಳನ್ನು ಹೇಳಿ ಅವರಲ್ಲಿ ಆದರ್ಶಗಳನ್ನು ತುಂಬುತ್ತಿದ್ದರು. ಜೀಜಾಬಾಯಿಯವರಂತೆ ತಮ್ಮ ಮಕ್ಕಳಿಗೆ ಉತ್ತಮ ಜೀವನ ಮೌಲ್ಯಗಳನ್ನು ಹೇಳಿಕೊಡಬೇಕು ಎಂದು ಸಲಹೆ ನೀಡಿದರು.

ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರನ್ನು ಸನ್ಮಾನಿಸಲಾಯಿತು. ಈಶ್ವರ ಗದಗ ಸ್ವಾಗತಿಸಿದರು, ರತ್ನಾ ಕುಂಬಾರ ನಿರೂಪಿಸಿದರು.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಹೂವಿನಶಿಗ್ಲಿ ವಿರಕ್ತಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳು ವಹಿಸಿದ್ದರು. ಪುರಸಭೆ ಅಧ್ಯಕ್ಷೆ ಯಲ್ಲಮ್ಮ ದುರಗಣ್ಣವರ, ಹಿರಿಯರಾದ ಶಂಕರಪ್ಪ ಬೊಮ್ಮನಳ್ಳಿ, ಛತ್ರಪತಿ ಶಿವಾಜಿ ಕ್ಷತ್ರಿಯ ಮರಾಠ ಸಂಘದ ಅಧ್ಯಕ್ಷ ಈಶ್ವರ ಗದಗ, ವಿಜಯಕುಮಾರ ಹತ್ತಿಕಾಳ, ಬಸವೇಶ ಮಹಾಂತಶೆಟ್ಟರ, ಮಹಾದೇವಪ್ಪ ಅಣ್ಣಿಗೇರಿ, ಯುವ ಘಟಕ ಅಧ್ಯಕ್ಷ ಮಂಜುನಾಥ ಗದಗ ಹಾಗೂ ಸಂಘದ ಪದಾಧಿಕಾರಿಗಳು, ಸದಸ್ಯರು ಉಪಸ್ಥಿತರಿದ್ದರು.


**ಪಟ್ಟಣ ಪಂಚಾಯತ ಕಾರ್ಯಾಲಯ, ನರೇಗಲ್ಲ**

ಫೋನ್ ನಂ : 08381-268228 ವೆಬ್ : www.naregaltown.gov.mrc.in ಇ-ಮೇಲ್ : ka.naregal.tp@gmail.com

ಕ್ರ.ಸಂ/ಪಪಂನ/ಮಳಿಗೆ/ಲೀಲಾವು/ವಹಿ/337/2024-25 ದಿನಾಂಕ : 17-02-2025

**ಹರಾಜು ಪ್ರಕಟಣೆ**

ನರೇಗಲ್ಲ ಪಟ್ಟಣ ಪಂಚಾಯತ ಮಾಲ್ಕಿ 10 ನೇ ಹಣಕಾಸು ಹಾಗೂ ಎಸ್.ಎಫ್.ಸಿ ಮತ್ತು ಎನ್.ಆರ್.ವೈ ಅನುದಾನದಡಿ ನಿರ್ಮಿಸಿದ ಅವಧಿ ಮುಗಿದ ವಾಣಿಜ್ಯ ಮಳಿಗೆಗಳ ಹರಾಜು ಪ್ರಕಟಣೆ

ಈ ಪ್ರಕಟಣೆ ಮೂಲಕ ನರೇಗಲ್ಲ ಪಟ್ಟಣದ ಸಾರ್ವಜನಿಕರಿಗೆ ಹಾಗೂ ವ್ಯಾಪಾರಸ್ಥರಿಗೆ ತಿಳಿಯಪಡಿಸುವುದೇನೆಂದರೆ, ನರೇಗಲ್ಲ ಪಟ್ಟಣ ಪಂಚಾಯತ ಒಡೆತನದಲ್ಲಿರುವ ಒಟ್ಟು 29 ವಾಣಿಜ್ಯ ಮಳಿಗೆಗಳನ್ನು ಬಾಡಿಗೆ ನೀಡುವ ಸಂಬಂಧ **ದಿನಾಂಕ :07-03-2025** ರಂದು ಬೆಳಿಗ್ಗೆ 11:30 ಗಂಟೆಗೆ ಸದರಿ ವಾಣಿಜ್ಯ ಮಳಿಗೆಗಳನ್ನು ಪಟ್ಟಣ ಪಂಚಾಯತ ಆವರಣದಲ್ಲಿ ಈ ಕೆಳಗಿನ ಷರತ್ತಿಗೊಳಪಟ್ಟು ಬಹಿರಂಗ ಹರಾಜು ಮಾಡಲಾಗುವುದು.

**ಮಳಿಗೆಗಳ ವಿವರ**

| ಕ್ರ ಸಂ | ಮಳಿಗೆ ಇರುವ ಸ್ಥಳದ ವಿವರ | ಮಳಿಗೆಗಳ ಹೆಸರು | ಮಳಿಗೆಗಳ ನಂ | ಠೇವಣಿ ಮೊತ್ತ | ಮಳಿಗೆಯ ಕನಿಷ್ಟ ಮಾಸಿಕ ಬಾಡಿಗೆ |
|---|---|---|---|---|---|
| 1 | ನರೇಗಲ್ಲ ದಿಂದ ಅಬ್ಬಿಗೇರಿ ಹೋಗುವ ರಸ್ತೆ ಬದಿ. | 10 ನೇ ಹಣಕಾಸು ಯೋಜನೆಯಡಿ ಯಲ್ಲಿ ನಿರ್ಮಿಸಿದ ಮಳಿಗೆಗಳು. | 1 1, (ಪರಿಶಿಷ್ಟ ಪಂಗಡದ ವರ್ಗ) 12 (ಪರಿಶಿಷ್ಟ ಜಾತಿ) 2,3,4,5,6,7,8,9,10,11,13 & 14 ಸಾಮಾನ್ಯ ವರ್ಗದವರು | 105000=00 | 6286=00 |
| 2 | ಗದಗ ರಸ್ತೆ ಪಟ್ಟಣ ಪಂಚಾಯತ ಕಚೇರಿ ಆವರಣ. | ಎಸ್.ಎಫ್.ಸಿ ಯೋಜನೆಯಡಿ ನಿರ್ಮಿಸಿದ ಮಳಿಗೆಗಳು. | 1,2,3,4,5,6,7 ಸಾಮಾನ್ಯ ವರ್ಗದವರಿಗೆ 8 (ಪರಿಶಿಷ್ಟ ಜಾತಿ ವರ್ಗ) | 105000=00 | 2687=00 |
| 3 | ಗದಗ ರಸ್ತೆ ಪಟ್ಟಣ ಪಂಚಾಯತ ಕಚೇರಿ ಆವರಣ. | 10 ನೇ ಹಣಕಾಸು ಯೋಜನೆಯಡಿಯಲ್ಲಿ ನಿರ್ಮಿಸಿದ ಮಳಿಗೆಗಳು. | 1,2,4,5 ಸಾಮಾನ್ಯ ವರ್ಗದವರಿಗೆ 3 ಅಂಗವಿಕಲರು | 100000=00 | 3448=00 |
| 4 | ನರೇಗಲ್ಲ ಹಳೇ ಬಸ್ ನಿಲ್ದಾಣದ ಹತ್ತಿರ. | ಎನ್.ಆರ್,ವಾಯ್ ಯೋಜನೆಯಡಿ ನಿರ್ಮಿಸಿದ ಮಳಿಗೆಗಳು. | 1 (ಪರಿಶಿಷ್ಟ ಜಾತಿ) 2 (ಪರಿಶಿಷ್ಟ ಪಂಗಡದ ವರ್ಗ) | 152000=00 | 4073=00 |

**ಷರತ್ತುಗಳು:-** 1) ನರೇಗಲ್ಲ ಪಟ್ಟಣ ಪಂಚಾಯತ ಒಡೆತನದಲ್ಲಿರುವ ಒಟ್ಟು 29 ವಾಣಿಜ್ಯ ಮಳಿಗೆಗಳ ಹರಾಜಿನಲ್ಲಿ ಹಳೆ ಮಳಿಗೆಗಳಿಗೆ **ರೂ 50000/-** ಠೇವಣಿಯನ್ನು ದಿನಾಂಕ : **06-03-2025 ರ ಸಾಯಂಕಾಲ 5.00** ಗಂಟೆಗೆ ಕಛೇರಿ ಸಮಯದೊಳಗೆ ಮುಖ್ಯಾಧಿಕಾರಿಗಳ ಹೆಸರಿನಲ್ಲಿ ಡಿ.ಡಿ ಮೂಲಕ ಪಾವತಿಸಿ ಹರಾಜಿನಲ್ಲಿ ಭಾಗವಹಿಸತಕ್ಕದ್ದು, ಹರಾಜಿನಲ್ಲಿ ಮಳಿಗೆಯನ್ನು ಪಡೆದವರಿಗೆ ಲೀಸ್ ಅವಧಿ ಮುಗಿಯುವವರೆಗೆ ಠೇವಣಿ ಹಣವನ್ನು ವಾಪಸ್ಸು ಕೊಡಲಾಗುವುದಿಲ್ಲ. ಉಳಿದವರಿಗೆ ಹರಾಜು ಮುಗಿದ ತಕ್ಷಣ ವಾಪಸ್ಸು ಕೊಡಲಾಗುವುದು.

2) ಹೆಚ್ಚಿನ ಮಾಹಿತಿಗಾಗಿ ಪಟ್ಟಣ ಪಂಚಾಯತಿಯ ವಿಷಯ ನಿರ್ವಾಹಕರನ್ನು ಸಂಪರ್ಕಿಸಲು ಅಥವಾ ಪಟ್ಟಣ ಪಂಚಾಯತ ವೆಬ್‌ಸೈಟ್ **www.naregaltown.gov.mrc.in** ನೋಡಬಹುದು.

ಸಹಿ/- ಮುಖ್ಯಾಧಿಕಾರಿ
ಪಟ್ಟಣ ಪಂಚಾಯತ ನರೇಗಲ್

ವಾ.ಸಾ.ಇ/ಗದಗ/628/ದೇಶಪಾಂಡೆಪಬ್ಲಿಸಿಟಿ/2024-25

ಸಹಿ/- ಅಧ್ಯಕ್ಷರು
ಪಟ್ಟಣ ಪಂಚಾಯತ ನರೇಗಲ್


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka